# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 91 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 24–10–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 91 | RNI No: KARKAN/2023/88462 | Chitradurga | Date: 24-10-2024 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಅ.26, 27ಕ್ಕೆ ಗ್ರಾಮ ಆಡಳಿತಾಧಿಕಾರಿ ನೇಮಕಾತಿ ಪರೀಕ್ಷೆ: 38 ಪರೀಕ್ಷಾ ಕೇಂದ್ರ 2

ಹಿರಿಯೂರು ರೈತರು ಹಿನ್ನೀರಿನ ಪ್ರದೇಶಕ್ಕೆ ಭೇಟಿ ನೀಡಿ ರೈತರ ಪರಿಸ್ಥಿತಿ ನೋಡ ಬನ್ನಿ 3

ತಾಲ್ಲೂಕಿನಾದ್ಯಂತ ಮುಂದುವರೆದ ಚಿತ್ತಮಳೆಯ ಹಾವಳಿ: ಬೆಳೆ ಮಳೆಗೆ ಆಹುತಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಮಳೆ ವರದಿ: 69 ಹೆಕ್ಟೇರ್ ಕೃಷಿ ಬೆಳೆ, 44 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿ

» **ಚಿತ್ರದುರ್ಗ**

ಮಂಗಳವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 3.7 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 7.3 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 0.1 ಹಿರಿಯೂರು ತಾಲ್ಲೂಕು 7 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 1 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 1.1 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 1.3 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 8.3 ಮಿ.ಮೀ, ನಾಯಕನಹಟ್ಟಿ 3.7 ಮಿ.ಮೀ, ಪರಶುರಾಂಪುರ 16.1 ಮಿ.ಮೀ, ತಳಕು 0.8 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ 0.2 ಮಿ.ಮೀ, ಹಿರೇಗುಂಟನೂರು 0.1 ಮಿ.ಮೀ, ತುರುವನೂರು 0.1 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 1.8 ಮಿ.ಮೀ, ಐಮಂಗಲ 4.8 ಮಿ.ಮೀ, ಧರ್ಮಪುರ 17.3 ಮಿ.ಮೀ, ಜವನಗೊಂಡನಹಳ್ಳಿ 3 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 1.3 ಮಿ.ಮೀ, ಬಿ.ದುರ್ಗ 0.8 ಮಿ.ಮೀ, ರಾಮಗಿರಿ 0.8 ಮಿ.ಮೀ, ತಾಳ್ಯ 1 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 1.6 ಮಿ.ಮೀ, ಮಾಡದಕೆರೆ 1.7 ಮಿ.ಮೀ, ಮತ್ತೋಡು 0.1 ಮಿ.ಮೀ, ಶ್ರೀರಾಂಪುರ 0.3 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 2.3 ಮಿ.ಮೀ ಹಾಗೂ ದೇವಸಮುದ್ರದಲ್ಲಿ 0.2 ಮಿ.ಮೀ ಮಳೆಯಾಗಿದೆ. 93 ಮನೆಗಳು ಭಾಗಶಃ ಹಾನಿ: ಮಂಗಳವಾರ ರಾತ್ರಿ ಸುರಿದ ಮಳೆಗೆ ಜಿಲ್ಲೆಯಾದ್ಯಂತ 93 ಮನೆಗಳು ಭಾಗಶಃ ಹಾನಿಯಾಗಿದ್ದು, 4 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣ ಹಾಗೂ 69 ಹೆಕ್ಟೇರ್ ಕೃಷಿ ಬೆಳೆ ಹಾಗೂ 44 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 18 ಮನೆಗಳು ಭಾಗಶಃ ಹಾನಿ, ಚಳ್ಳಕೆರೆ ತಾಲ್ಲೂಕಿನಲ್ಲಿ 35 ಮನೆಗಳು 40 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾಗೂ 60 ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿದೆ. ಹೊಳಲ್ಕೆರೆ 14 ಮನೆಗಳು, ಹೊಸದುರ್ಗ 13 ಮನೆಗಳು ಭಾಗಶಃ ಹಾನಿ ಹಾಗೂ 4 ಮನೆಗೆ ನೀರು ನುಗ್ಗಿದೆ. ಹಿರಿಯೂರು ತಾಲ್ಲೂಕಿನಲ್ಲಿ 3 ಮನೆಗಳು ಭಾಗಶಃ ಹಾನಿ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 10 ಮನೆಗಳು ಭಾಗಶಃ ಹಾನಿ ಹಾಗೂ 9 ಹೆಕ್ಟೇರ್ ಕೃಷಿ ಬೆಳೆ ಹಾನಿ ಹಾಗೂ 4 ಹೆಕ್ಟೇರ್ ತೋಟಗಾರಿಕೆ ಬೆಳೆಹಾನಿಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

### ಅ.25 ರಂದು ನೇರ ನೇಮಕಾತಿ ಸಂದರ್ಶನ



» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಇದೇ ಅ.25ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಸಂದರ್ಶನದಲ್ಲಿ ಮೂರಕ್ಕೂ ಹೆಚ್ಚು ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೊಮಾ, ಐಟಿಐ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು 5 ಬಯೋಡಾಟಾ ಪ್ರತಿಗಳು, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಹಾಗೂ ಫೋಟೊಗಳೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಹಳೇ ವೈಶಾಲಿ ಗೇಟ್ ಹತ್ತಿರದ ಸ್ಟೇಡಿಯಂ ರಸ್ತೆಯಲ್ಲಿನ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 9945587060, 9964528212, 7019755147 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

# ಅದ್ದೂರಿ ಕನ್ನಡ ರಾಜ್ಯೋತ್ಸವ ಆಚರಣೆ; ಅಗತ್ಯ ಸಿದ್ದತೆಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

» **ಚಿತ್ರದುರ್ಗ**

ಈ ಬಾರಿಯ ಕನ್ನಡ ರಾಜ್ಯೋತ್ಸವವನ್ನು ನವೆಂಬರ್ 01 ರಂದು ವಿಜೃಂಭಣೆಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಅದರನ್ವಯ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಮಟ್ಟದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಆಚರಿಸುವ ಸಂಬಂಧ, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ ಪೂರ್ವಭಾವಿ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯೋತ್ಸವದ ಅಂಗವಾಗಿ ನವೆಂಬರ್ 01 ರಂದು ಬೆಳಿಗ್ಗೆ 7.30ಕ್ಕೆ ತಾಯಿ ಭುವನೇಶ್ವರಿಯ ಭಾವಚಿತ್ರದ ಮೆರವಣಿಗೆಯು ನಗರದ ನೀಲಕಂಠೇಶ್ವರ ದೇಗುಲದಿಂದ ಪ್ರಾರಂಭವಾಗಲಿದೆ. ಈ ಬಾರಿಯ ಸ್ಥಬ್ದಚಿತ್ರ ಮೆರವಣಿಗೆ ಅರ್ಥಪೂರ್ಣವಾಗಿರಬೇಕು. ಈ ನಿಟ್ಟಿನಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದ ಸ್ಥಬ್ದಚಿತ್ರ ಸಮಿತಿ ಹೆಚ್ಚಿನ ಸಂಖ್ಯೆ ಸ್ಥಬ್ದಚಿತ್ರಗಳ ಬದಲಾಗಿ ಆಯ್ದ 10 ಇಲಾಖೆಗಳ ಅತ್ಯುತ್ತಮ ಸ್ಥಬ್ದಚಿತ್ರಗಳಿಗೆ ಮೆರವಣಿಗೆಯಲ್ಲಿ ಪಾಲ್ಗೊಳ್ಳಲು ಅವಕಾಶ ನೀಡಬೇಕು. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಸಮಿತಿ ಭಾಗವಾಗಿ ಕಾರ್ಯನಿರ್ವಹಿಸುವುದರೊಂದಿಗೆ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಕಾರ್ಯ ನಡೆಸಬೇಕು. ಜಿಲ್ಲಾ ಪಂಚಾಯಿತಿ, ಕೃಷಿ, ತೋಟಗಾರಿಕೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸೇರಿದಂತೆ ಕೆ.ಎಸ್.ಆರ್.ಟಿ.ಸಿ ವತಿಯಿಂದ ಸರ್ಕಾರ ಸಾಧನೆಗಳನ್ನು ಸ್ತಬ್ಧಚಿತ್ರಗಳ ಮೂಲಕ ಸಾರ್ವಜನಿಕರಿಗೆ ತಿಳಿಸುವ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.ಮೆರವಣಿಗೆಯು ನಗರದ ನೀಲಕಂಠೇಶ್ವರ ದೇಗುಲದಿಂದ ಹೊರಟು, ಪ್ರಮುಖ ರಸ್ತೆ ಮೂಲಕ ರಾಜ್ಯೋತ್ಸವ ಸಮಾರಂಭ ಜರುಗುವ ಪೊಲೀಸ್ ಕವಾಯತು ಮೈದಾನದವರೆಗೆ ಸಾಗಿ ಬರಲಿದೆ. ಅಂದು ಬೆಳಿಗ್ಗೆ 9ಕ್ಕೆ ಪೊಲೀಸ್ ಕವಾಯತು ಮೈದಾನದಲ್ಲಿ ರಾಜ್ಯೋತ್ಸವ ಸಮಾರಂಭದಅಂಗವಾಗಿಜಿಲ್ಲಾಉಸ್ತುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ ನೆರವೇರಲಿದ್ದು ಶಿಷ್ಠಾಚಾರದ ಅನ್ವಯ ಎಲ್ಲ ಗಣ್ಯಮಾನ್ಯರನ್ನು ಆಹ್ವಾನಿಸಲಾಗುವುದು. ಇದಕ್ಕಾಗಿ ಜಿಲ್ಲಾ ಪಂಚಾಯಿತಿ ಸಿಇಓ ಅಧ್ಯಕ್ಷತೆಯಲ್ಲಿ ವೇದಿಕೆ ಸಮಿತಿಯನ್ನು ರಚಿಸಲಾಗಿದೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕರ ನೇತೃತ್ವದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳ ಸಮಿತಿ ರಚನೆ ಮಾಡಲಾಗಿದ್ದು, ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಬೆಳಿಗ್ಗೆ ಪೊಲೀಸ್ ಕವಾಯತು ಮೈದಾನದಲ್ಲಿ ಹಾಗೂ ಸಂಜೆ ತ.ರಾ.ಸು. ರಂಗಮಂದಿರದಲ್ಲಿ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಡುವರು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಭೆಯಲ್ಲಿ ಮಾಹಿತಿ ನೀಡಿದರು.



ವೇದಿಕೆ ಕಾರ್ಯಕ್ರಮದಲ್ಲಿ ಜಿಲ್ಲೆಯ ಕಲಾವಿದರಿಂದ ನಮ್ಮ ನಾಡು, ನುಡಿ, ಸಂಸ್ಕೃತಿ ಬಿಂಬಿಸುವ ಗೀತಗಾಯನ ಕಾರ್ಯಕ್ರಮ ಆಯೋಜಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು. ಇದೇ ವೇಳೆ ಕನ್ನಡ ರಾಜ್ಯೋತ್ಸವವನ್ನು ವ್ಯವಸ್ಥಿತವಾಗಿ ಆಚರಿಸಲು ಅನುವಾಗುವಂತೆ ರಚಿಸಲಾಗಿರುವ ಸ್ವಾಗತ ಸಮಿತಿ, ಹಣಕಾಸು ಸಮಿತಿ, ಮೆರವಣಿಗೆ ಸಮಿತಿ ಹಾಗೂ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಆಯ್ಕೆ ಸಮಿತಿ ಸೇರಿದಂತೆ ವಿವಿಧ ಸಮಿತಿಗಳು ತಮಗೆ ವಹಿಸಿರುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿ, ರಾಜ್ಯೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು. ವಿವಿಧ ಕ್ಷೇತ್ರಗಳಲ್ಲಿನ ಸಾಧಕರಿಗೆ ಸನ್ಮಾನಕ್ಕಾಗಿ ಆಯ್ಕೆ ಮಾಡುವ ಸಂದರ್ಭದಲ್ಲಿ ಕ್ಷೇತ್ರವಾರು ಅವರ ಸಾಧನೆಯನ್ನು ಪರಿಶೀಲಿಸಬೇಕು, ಆಯ್ಕೆಯು ಪಾರದರ್ಶಕ ಹಾಗೂ ತಾರತಮ್ಯ ರಹಿತವಾಗಿರಬೇಕು, ಮಹಿಳೆಯರಿಗೂ ಪ್ರಾಧಾನ್ಯತೆ ನೀಡಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಮಂಜುನಾಥ, ಆಹಾರ ಇಲಾಖೆ ಉಪನಿರ್ದೇಶಕ ಮಧುಸೂಧನ್, ನಗರಸಭೆ ಪೌರಾಯುಕ್ತೆ ರೇಣುಕಾ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ವಿವಿಧ ಇಲಾಖೆಗಳ ಅಧಿಕಾರಿಗಳು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಸ್ವಾಮಿ, ರಂಗಕರ್ಮಿ ಕೆ.ಪಿ.ಎಂ.ಗಣೇಶಯ್ಯ, ನಿವೃತ್ತ ಪತ್ರಕರ್ತ ಟಿ.ಕೆ. ಬಸವರಾಜ್, ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಹಾಗೂ ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

### ಕನ್ನಡ ರಾಜ್ಯೋತ್ಸವ ಸಂದರ್ಭದಲ್ಲಿ ಸನ್ಮಾನಕ್ಕೆ ಸಾಧಕರ ಆಯ್ಕೆ

» **ಚಿತ್ರದುರ್ಗ**

ನವೆಂಬರ್ 01 ರಂದು ಜಿಲ್ಲಾ ಮಟ್ಟದಲ್ಲಿ ಆಚರಿಸಲಾಗುವ ಕನ್ನಡ ರಾಜ್ಯೋತ್ಸವ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿನ ಸಾಧಕರನ್ನು ಸನ್ಮಾನಿಸಲು ಉದ್ದೇಶಿಸಲಾಗಿದ್ದು, ಅರ್ಹ ಸಾಧಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲಾಡಳಿತ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ನ. 01 ರಂದು ಕನ್ನಡ ರಾಜ್ಯೋತ್ಸವ ಆಚರಣೆಯ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿರುವ ಜಿಲ್ಲೆಯ ಸಾಧಕರಿಗೆ ಸನ್ಮಾನಿಸಲು, ಬುಧವಾರ ಜರುಗಿದ ಪೂರ್ವಭಾವಿ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದ್ದು, ಅದರಂತೆ, ಕ್ರೀಡೆ, ರಂಗಭೂಮಿ, ಜಾನಪದ, ಕಲೆ ಮತ್ತು ಸಾಹಿತ್ಯ, ಸಮಾಜ ಸೇವೆ, ಮಾಧ್ಯಮ, ಸಂಗೀತ, ವೈದ್ಯಕೀಯ ಮತ್ತು ಸಂಶೋಧನೆ, ಕೃಷಿ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಉತ್ತಮ ಸೇವೆ ಹಾಗೂ ಸಾಧನೆ ಮಾಡಿರುವ ಅರ್ಹ ಸಾಧಕರಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯೊಂದಿಗೆ ತಮ್ಮ ಸಾಧನೆಯ ವಿವರಗಳು, ಪೂರಕವಾದ ಛಾಯಾಚಿತ್ರಗಳು, ಪತ್ರಿಕಾ ವರದಿಗಳು ಹಾಗೂ ಸೂಕ್ತ ದಾಖಲೆಗಳನ್ನು ಲಗತ್ತಿಸಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ತ.ರಾ.ಸು. ರಂಗಮಂದಿರ ಆವರಣ, ಚಿತ್ರದುರ್ಗ ಇವರಿಗೆ ಅ. 28 ರಂದು ಮಧ್ಯಾಹ್ನ 12 ಗಂಟೆಯ ಒಳಗಾಗಿ ಸಲ್ಲಿಸಬೇಕು ಎಂದು ಕನ್ನಡ ರಾಜ್ಯೋತ್ಸವ ಸಮಾರಂಭ ಸನ್ಮಾನ ಉಪಸಮಿತಿಯ ಅಧ್ಯಕ್ಷರು ಹಾಗೂ ಉಪವಿಭಾಗಾಧಿಕಾರಿ ಕಾರ್ತಿಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಸಾಧ್ವಿ, ವೀರತ್ವ ಗುಣಗಳ ರಾಣಿ ಚನ್ನಮ್ಮನ ಜೀವನ ಇಂದಿನ ಮಹಿಳೆಯರಿಗೆ ಸ್ಫೂರ್ತಿ: ಎಡಿಸಿ ಬಿ.ಟಿ.ಕುಮಾರಸ್ವಾಮಿ

» **ಚಿತ್ರದುರ್ಗ**

ಬ್ರಿಟೀಷರ ಸಂಕೋಲೆಯಿಂದ ದೇಶವನ್ನು ಮುಕ್ತಿಗೊಳಿಸಿ, ಸ್ವತಂತ್ರದೆಡೆಗೆ ತರಲು ಹೋರಾಡಿದ ಸಾಧ್ವಿ ಹಾಗೂ ವೀರ ಮಹಿಳೆ ಕಿತ್ತೂರು ರಾಣಿ ಚನ್ನಮ್ಮ ಅವರ ಗುಣ, ಶೌರ್ಯ, ಜೀವನ ಆದರ್ಶಗಳು ಇಂದಿನ ಮಹಿಳೆಯರಿಗೂ ಸ್ಪೂರ್ತಿದಾಯಕ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಬುಧವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮದಲ್ಲಿ ರಾಣಿ ಚನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.



ದೇಶ ಹಾಗೂ ಈ ನಾಡು ಕಂಡಂತಹ ವೀರಾಗ್ರಣಿ ಕಿತ್ತೂರು ರಾಣಿ ಚನ್ನಮ್ಮ. ಅವರ ಜೀವನ ಇಂದಿಗೂ ನೈಜ ಮತ್ತು ನಿರಂತರ ಉದಾಹರಣೆ. ತನ್ನ ನಡೆ ನುಡಿಗಳ ಮೂಲಕ ಸ್ವಾತಂತ್ರ್ಯದ ಸ್ವಾಭಿಮಾನವನ್ನು ಹುಟ್ಟು ಹಾಕಿದ ದಿಟ್ಟ ಮಹಿಳೆ. ಇಂದು ಹೆಣ್ಣು ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಹೀಗೆ ಎಲ್ಲಾ ರೀತಿಯಲ್ಲೂ ಸಹ ಸರಿಸಮಾನಳು. ಅಂತರಿಕ್ಷ ವಲಯಲ್ಲಿ ಸಾಧನೆ ಮಾಡುವಂತಹ ಛಲ ಹೆಣ್ಣು ಮಕ್ಕಳಲ್ಲಿದೆ. ಪೋಷಕರು ತಮ್ಮ ಮಕ್ಕಳಿಗೆ ಚನ್ನಮ್ಮನವರ ಧೈರ್ಯ, ಶೌರ್ಯ, ತತ್ವಾದರ್ಶಗಳನ್ನು ಬಿತ್ತಬೇಕು. ಎಂತಹದೇ ಸಂದರ್ಭದಲ್ಲಿಯೂ ಧೃತಿಗೆಡದೆ ಮುನ್ನಡೆದು ಉತ್ತಮ ಸಂಸ್ಕಾರವಂತರಾಗಿ ಬಾಳಬೇಕು ಎಂದು ತಿಳಿಸಿದರು.ಭರಮಸಾಗರ ಬಾಪೂಜಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲೆ ಡಾ.ಎನ್.ಮಮತ ಉಪನ್ಯಾಸ ನೀಡಿ, ಕಿತ್ತೂರು ರಾಣಿ ಚನ್ನಮ್ಮ ಜೀವನ ವೃತ್ತಾಂತವನ್ನು ತಿಳಿಸಿದ ಅವರು, ಬ್ರಿಟೀಷರ ವಿರುದ್ಧ ಹೋರಾಡಿದ ದಿಟ್ಟ ಮಹಿಳೆ ಕಿತ್ತೂರು ರಾಣಿ ಚನ್ನಮ್ಮ. ಅವರ ಧೈರ್ಯ ಇಂದಿನ ಮಹಿಳೆಯರಿಗೆ ಸ್ಫೂರ್ತಿ. ಬ್ರಿಟೀಷರು 1824 ಅಕ್ಟೋಬರ್ 23 ರಂದು ಕಿತ್ತೂರಿನ ಕೋಟೆಗೆ ಮುತ್ತಿಗೆ ಹಾಕಿದ ಸಂದರ್ಭದಲ್ಲಿ, ಬ್ರಿಟೀಷರನ್ನು ಹತ್ತಿಕ್ಕಿದ ಸವಿ ನೆನಪಿಗಾಗಿ ಕಿತ್ತೂರಿನಲ್ಲಿ ಮೂರು ದಿನಗಳ ಕಾಲ ಕಿತ್ತೂರು ಉತ್ಸವವನ್ನು ಆಚರಿಸಲಾಗುತ್ತದೆ ಎಂದರು.

ಅವರು ಕಿತ್ತೂರು ಸಂಸ್ಥಾನವನ್ನು ಉಳಿಸಲು ಅನಿವಾರ್ಯವಾಗಿ ಬಾಲ್ಯದಲ್ಲಿಯೇ ವೀರಗಚ್ಚೆ ಹಾಕಿದ ಮಹಿಳಾ ಮುಕುಟ ಮಣಿ. ನಮ್ಮ ಮಣ್ಣಿನ ಸತ್ವ ನಿಂತಿರುವುದೇ ಇಂತಹ ಮಹಾನ್ ಜೀವಗಳ ಹಿನ್ನೆಲೆಯಲ್ಲಿ. ಈ ಹಿಂದೆ ಇಂತಹ ಮಹನೀಯರ ಬಗ್ಗೆ ವಚನ, ಕೀರ್ತನೆಗಳಲ್ಲಿ ಹೇಳುವುದನ್ನು ನಾವು ಕೇಳಿದ್ದೇವೆ. ಮನೋರಂಜನೆಯ ಮೂಲಕ ನೈತಿಕ ಸಮಾಜವನ್ನು ಕಟ್ಟುವ ಕೆಲಸ ಮಾಡಲಾಗುತ್ತಿತ್ತು. ಹೀಗಾಗಿ ಇಂತಹ ಮಹನೀಯರ ಜೀವನ ಮೌಲ್ಯ, ತತ್ವಾದರ್ಶಗಳನ್ನು ತಮ್ಮ ಮಕ್ಕಳಿಗೂ ತಿಳಿಸಿ ಭವಿಷ್ಯವನ್ನು ಅರಿತು ಜೀವಿಸಬೇಕು ಎಂದರು.

ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಅವರು ಗೀತಗಾಯನ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಪಂಚಮಸಾಲಿ ಸಮಾಜದ ಜೆ.ಶಿವಪ್ರಕಾಶ್, ಉಮಾ ರಮೇಶ್, ಶೈಲಾ ಕಲ್ಲೇಶ್, ಮೋಕ್ಷಾ ರುದ್ರಸ್ವಾಮಿ, ಜಿ.ಬಸವರಾಜಪ್ಪ, ಪ್ರಕಾಶ್, ಮಂಜುನಾಥ ಸ್ವಾಮಿ, ನರೇಂದ್ರ ಬಾಬು, ವೀರಶೈವ ಸಮಾಜದ ವೀರೇಂದ್ರ ಕುಮಾರ್, ಎನ್.ತಿಪ್ಪಣ್ಣ, ಹೇಮರೆಡ್ಡಿ ಮಲ್ಲಮ್ಮ ಸಮಾಜದ ಚಿದಾನಂದಪ್ಪ, ಅಕ್ಕನ ಬಳಗದ ಪ್ರೇಮ ಬಾಲಚಂದರ್, ಅಖಿಲ ಭಾರತ ವೀರಶೈವ ಸಮಾಜದ ಮಹಿಳಾ ನಿರ್ದೇಶಕಿ ರೀನಾ ವೀರಭದ್ರಪ್ಪ, ಶಿವಸಿಂಪಿ ಸಮಾಜದ ನಿರ್ದೇಶಕ ಕೊಟ್ರೇಶ್ ಸೇರಿದಂತೆ ಸಮಾಜದ ಮುಖಂಡರು, ಗಣ್ಯರು, ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಹೊಳಲ್ಕೆರೆ: ಅ.29,30 ರಂದು ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ವತಿಯಿಂದ ಹೊಳಲ್ಕೆರೆ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಇದೇ ಅಕ್ಟೋಬರ್ 29 ಮತ್ತು 30ರಂದು ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ಪುನರ್ ನಿಗಧಿಪಡಿಸಲಾಗಿದೆ.

The prohibition of Employment as Manual Scavengers and Their Rehabilitation Act, 2013 ರ 14 ಅನ್ವಯ ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು 2024ರ ಅ.8 ಮತ್ತು 9ರಂದು ಸಮೀಕ್ಷಾ ಕ್ಯಾಂಪ್‌ಗಳನ್ನು ಹಮ್ಮಿಕೊಂಡಿರುವ ಕುರಿತು ಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸಲಾಗಿತ್ತು. ಆದರೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿಗಳು ಅ.4 ರಿಂದ ರಾಜ್ಯಾದ್ಯಂತ ಮುಷ್ಕರದಲ್ಲಿ ಭಾಗಿಯಾದ ಕಾರಣ ಕಾರ್ಯಕ್ರಮವನ್ನು ಮುಂದೂಡಲಾಗಿತ್ತು. ಪ್ರಯುಕ್ತ ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ಇದೇ ಅ.29 ಹಾಗೂ 30ರಂದು ಪುನರ್ ನಿಗಧಿಪಡಿಸಿದ್ದು, ಸ್ವಯಂ ಘೋಷಿತ ಅರ್ಜಿಗಳನ್ನು ಪಡೆದು ಮುಂದಿನ ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

### ಅ.24ರಂದು ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಪೊಲೀಸ್ ಇಲಾಖೆ, ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿಯವರ ಸಂಯುಕ್ತಾಶ್ರಯದಲ್ಲಿ ಇದೇ ಅ.24ರಂದು ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಸಭಾಂಗಣದಲ್ಲಿ "ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಮತ್ತು ಮಾನಸಿಕ ಯೋಗಕ್ಷೇಮ ಜಾಗೃತಿ ಕಾರ್ಯಾಗಾರ" ಹಮ್ಮಿಕೊಳ್ಳಲಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉದ್ಘಾಟಿಸುವರು. ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು ಅಧ್ಯಕ್ಷತೆ ವಹಿಸುವರು. ಸಶಸ್ತ್ರ ಮೀಸಲು ಪಡೆ ಪೊಲೀಸ್ ಉಪ ಅಧೀಕ್ಷಕ ಎಸ್.ಎಸ್. ಗಣೇಶ್, ಚಿತ್ರದುರ್ಗ ಉಪ ವಿಭಾಗದ ಉಪ ಅಧೀಕ್ಷಕ ಪಿ.ಕೆ.ದಿನಕರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ. ರೇಣುಪ್ರಸಾದ್, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಕಾರ್ಯದರ್ಶಿ ಆರ್.ಗಂಗಾಧರ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಡಿ.ಎಂ.ಅಭಿನವ್, ಜಿಲ್ಲಾ ಮಾನಸಿಕ ಕಾರ್ಯಕ್ರಮ ಆರೋಗ್ಯ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಉಪಸ್ಥಿತರಿರುವರು. ಉಪ ಪ್ರಧಾನ ಕಾನೂನು ಅಭಿರಕ್ಷಕ ಎಂ.ಮೂರ್ತಿಯವರು "ಮಾನಸಿಕ ಆರೋಗ್ಯ ಆರೈಕೆ ಕಾಯ್ದೆ–2017" ಹಾಗೂ ಜಿಲ್ಲಾಸ್ಪತ್ರೆ ಮನೋವೈದ್ಯ ಡಾ.ಆರ್. ಮಂಜುನಾಥ್ "ಕಾರ್ಯಕ್ಷೇತ್ರದಲ್ಲಿ ಮಾನಸಿಕ ಒತ್ತಡ ನಿರ್ವಹಣೆ" ಕುರಿತು ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

### ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಾಗಾರ

» ಚಿತ್ರದುರ್ಗ

ಭಾರತೀಯ ವಿಜ್ಞಾನ ಸಂಸ್ಥೆ, ವಿಜ್ಞಾನ ತಂತ್ರಜ್ಞಾನ ಮತ್ತು ನಾವಿನ್ಯತ ಕೇಂದ್ರ (ಎಸ್‌ಟಿಐ ಹಬ್) ಹಾಗೂ ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್‌ಮೆಂಟ್ (ಎಸ್‌ಐಡಿ), ಸಹಯೋಗದಲ್ಲಿ ಚಳ್ಳಕೆರೆ ತಾಲ್ಲೂಕಿನ ಕುದಾಪುರ ಭಾರತೀಯ ವಿಜ್ಞಾನ ಸಂಸ್ಥಾನ ಆವರಣದಲ್ಲಿ ನವೆಂಬರ್ 6 ರಿಂದ 11 ರವರೆಗೆ ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಗಾರವನ್ನು ಆಯೋಜಿಸಲಾಗಿದೆ.6 ದಿನಗಳ ತರಬೇತಿಯಲ್ಲಿ ಹೊಸ ಉದ್ಯಮವನ್ನು ಆರಂಭಿಸಲು ಆಸಕ್ತಿ ಇರುವವರಿಗಾಗಿ ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ಕುರಿತು ತರಬೇತಿ ನೀಡಲಾಗುವುದು. 18–45 ವರ್ಷದೊಳಗಿನ ಕನಿಷ್ಠ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿರುವ ಆಸಕ್ತ ಅಭ್ಯರ್ಥಿಗಳು ಅ.25ರ ಒಳಗೆ ತಮ್ಮ ಹೆಸರನ್ನು ಗಣೇಶ್ ಮೊ. 8970582703, ಕೋಟೇಶ್ ಮೊ.9743675646 ಗೆ ಕರೆ ಮಾಡಿ ನೊಂದಾಯಿಸಿಕೊಳ್ಳಬಹುದು. ಅ.28ರೊಳಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಎಸ್.ಸಿ, ಎಸ್.ಟಿ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ 6 ದಿನಗಳ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಬೇಕು. ಊಟ ಮತ್ತು ವಸತಿ ಸೌಲಭ್ಯದೊಂದಿಗೆ ಸಂಪೂರ್ಣ ಉಚಿತವಾಗಿ ತರಬೇತಿ ನೀಡಲಾಗುತ್ತಿದ್ದು ಇದರ ಸದಪಯೋಗ ಪಡೆದುಕೊಳ್ಳುವಂತೆ ವಿಜ್ಞಾನ ತಂತ್ರಜ್ಞಾನ ಮತ್ತು ನಾವಿನ್ಯತ ಕೇಂದ್ರ ವ್ಯವಸ್ಥಾಪಕ ಪ್ರತಾಪ್ ಮೂರ್ತಿ ತಿಳಿಸಿದ್ದಾರೆ.

ಪಾರದರ್ಶಕ, ನಿಷ್ಪಕ್ಷಪಾತವಾಗಿ ಪರೀಕ್ಷಾ ಕಾರ್ಯ ನಿರ್ವಹಿಸಿ; ಪೂರ್ವ ಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಅ.26, 27ಕ್ಕೆ ಗ್ರಾಮ ಆಡಳಿತಾಧಿಕಾರಿ ನೇಮಕಾತಿ ಪರೀಕ್ಷೆ; 38 ಪರೀಕ್ಷಾ ಕೇಂದ್ರ: 14253 ಅಭ್ಯರ್ಥಿ

» ಚಿತ್ರದುರ್ಗ



ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಇದೇ ಅ.26 ರಂದು ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಯ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ–2 ಹಾಗೂ ಅ.27 ರಂದು ಮುಖ್ಯ ಪರೀಕ್ಷೆಯ ಪತ್ರಿಕೆ–1 ಹಾಗೂ ಪತ್ರಿಕೆ–2ರ ಪರೀಕ್ಷೆಗಳು ನಡೆಯಲಿವೆ. ಅತ್ಯಂತ ಪಾರದರ್ಶಕ, ನಿಷ್ಪಕ್ಷಪಾತ ಹಾಗೂ ಪರಿಣಾಮಕಾರಿಯಾಗಿ ಈ ಪರೀಕ್ಷೆಗಳ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಯ ಸಿದ್ಧತೆಯ ಕುರಿತು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಕಾರ್ಯದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನೀಡಿರುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸಬೇಕು. ಪರೀಕ್ಷೆ ಆರಂಭಕ್ಕೂ 2 ಗಂಟೆ ಅವಧಿಗೆ ಮೊದಲು ಖಜಾನೆಯಿಂದ ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್‌ಗಳನ್ನು ಮಾರ್ಗಾಧಿಕಾರಿಗಳಿಗೆ ನೀಡಿ, ಪರೀಕ್ಷಾ ಕೇಂದ್ರಗಳಿಗೆ ತಲುಪಿಸಬೇಕು. ಪ್ರತಿ ಪರೀಕ್ಷಾ ಕೇಂದ್ರಗಳಲ್ಲಿ ಓರ್ವ ಮಹಿಳಾ ಹಾಗೂ ಓರ್ವ ಪುರುಷ ಪೊಲೀಸರನ್ನು ಅಭ್ಯರ್ಥಿಗಳ ತಪಾಸಣೆ ಕಾರ್ಯನಿಯೋಜಿಸಬೇಕು. ಯಾವುದೇ ಲೋಪದೋಷಗಳು ಆಗದಂತೆ ಜವಾಬ್ದಾರಿಯಿಂದ ಪರೀಕ್ಷಾ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಪರೀಕ್ಷೆಗಳು ಪಾರದರ್ಶಕವಾಗಿ ಹಾಗೂ ಸುವ್ಯವಸ್ಥಿತವಾಗಿ ನಡೆಸುವ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ಕಾನೂನು ಬಾಹಿರ ಚಟುವಟಿಕೆ, ಅಹಿತಕರ ಘಟನೆಗಳು ನಡೆಯದಂತೆ ಪರೀಕ್ಷೆಗಳನ್ನು ಶಾಂತ ವಾತವರಣದಲ್ಲಿ ನಡೆಸಲು ಪರೀಕ್ಷಾ ಕೇಂದ್ರದ 200 ಮೀಟರ್ ವ್ಯಾಪ್ತಿ ಪ್ರದೇಶದ ಸುತ್ತಲೂ ನಿಷೇಧಿತ ಪ್ರದೇಶವೆಂದು ಘೋಷಿಸಿ, ನಿಷೇಧಾಜ್ಞೆ ಜಾರಿಗೊಳಿಸಲಾಗುವುದು. ಪರೀಕ್ಷಾ ಕೇಂದ್ರದ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ ಹಾಗೂ ಕಂಪ್ಯೂಟರ್ ಇಂಟರ್‌ನೆಟ್ ಕೇಂದ್ರಗಳನ್ನು ಪರೀಕ್ಷಾ ನಡೆಯುವ ದಿನದಂದು ಮುಚ್ಚುವಂತೆ ಮತ್ತು ಪರೀಕ್ಷಾ ಕೇಂದ್ರಕ್ಕೆ ಅಭ್ಯರ್ಥಿಗಳು ಯಾವುದೇ ಕಾರಣಕ್ಕೂ ಮೊಬೈಲ್ ಫೋನ್‌ಗಳನ್ನು ಹಾಗೂ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರದಂತೆ ಆದೇಶ ಹೊರಡಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಉಪನ್ಯಾಸಕರು, ಕಚೇರಿ ಸಿಬ್ಬಂದಿಯವರು ಪರೀಕ್ಷೆ ನಡೆಯುವ ಅವಧಿಯಲ್ಲಿ ಮೊಬೈಲ್ ಫೋನುಗಳನ್ನು ತರುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಬೇಕು. ಯಾವುದೇ ಕಾರಣಕ್ಕೂ ಪೀಠೋಪಕರಣ, ಕುಡಿಯುವ ನೀರು, ಶೌಚಾಲಯದ ವ್ಯವಸ್ಥೆ ಸೇರಿದಂತೆ ಮೂಲಸೌಕರ್ಯಗಳ ಕೊರತೆ ಆಗಬಾರದು. ಕೆ.ಇ.ಎ ನಿರ್ದೇಶನಕ್ಕೆ ಕಾಯದೆ ಎಲ್ಲಾ ಪರೀಕ್ಷಾ ಕೊಠಡಿಗಳಲ್ಲಿ ತಪ್ಪದೇ ಸಿ.ಸಿ.ಟಿವಿ ಕ್ಯಾಮರಾ ಅಳವಡಿಸಬೇಕು ಎಂದು ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಕಳೆದ ಸೆ.29ರಂದು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ನಡೆಸಲಾಗಿತ್ತು. ಅ.26 ಶನಿವಾರದಂದು ಮಧ್ಯಾಹ್ನ 2:30 ರಿಂದ 4:30 ರವರಗೆ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ–2 ನಡೆಯಲಿದ್ದು, ಚಿತ್ರದುರ್ಗ ನಗರದ 5 ಕೇಂದ್ರಗಳಲ್ಲಿ ಒಟ್ಟು 1515 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಅ.27 ರಂದು ಬೆಳಿಗ್ಗೆ 10:30 ರಿಂದ 12:30 ವರೆಗೆ ಪತ್ರಿಕೆ–1 ಹಾಗೂ ಮಧ್ಯಾಹ್ನ 2:30 ರಿಂದ 4:30 ರವರಗೆ ಪತ್ರಿಕೆ–2 ಪರೀಕ್ಷೆ ನಡೆಯಲಿದ್ದು, ಚಿತ್ರದುರ್ಗ, ಹೊಳಲ್ಕೆರೆ ಹಾಗೂ ಚಳ್ಳಕೆರೆ ನಗರದಲ್ಲಿನ 38 ಕೇಂದ್ರಗಳಲ್ಲಿ ಒಟ್ಟು 14,253 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಜಿಲ್ಲೆಯಲ್ಲಿ ಯಾವುದೇ ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಕೇಂದ್ರಗಳು ಇರುವುದಿಲ್ಲ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ ಸಭೆಯಲ್ಲಿ ಮಾಹಿತಿ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಪರೀಕ್ಷಾ ಕೇಂದ್ರ ಮುಖ್ಯಸ್ಥರು, ವೀಕ್ಷಕರು ಇದ್ದರು.

## ಒಳಮೀಸಲಾತಿ ಜಾರಿಗೆ ವಕೀಲರ ಒತ್ತಾಯ

» ದಾವಣಗೆರೆ



ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಆದೇಶದಂತೆ ರಾಜ್ಯ ಸರ್ಕಾರ ಒಳಮೀಸಲಾತಿ ಜಾರಿಗೊಳಿಸಬೇಕೆಂದು ಒತ್ತಾಯಿಸಿ ಮಾದಿಗ ಮತ್ತು ಛಲವಾದಿ ವಕೀಲರು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಒಳಮೀಸಲಾತಿಗೆ ಸುಪ್ರೀಂ ಅಸ್ತು ಎಂದಿದೆ. ಆದರೆ, ಆದೇಶ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದೆ.

ಅಹಿಂದ ಹೆಸರು ಹೇಳಿಕೊಂಡು ಬಂದಿರುವ ಸರ್ಕಾರ ದಲಿತರಿಗೆ ಒಳಿತು ಮಾಡುವಲ್ಲಿ ಹಿಂದೇಟು ಹಾಕುತ್ತಿದೆ ಎಂದು ಆರೋಪಿಸಿದರು.

ಒಳಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿ ಕಳೆದ ಮೂರು ದಶಕಗಳಿಂದ ನಡೆಸಿದ ನಿರಂತರ ಹೋರಾಟದ ಫಲವಾಗಿ ಈಗ ಒಳಮೀಸಲಾತಿ ದೊರಕುವ ಸಮಯ ಬಂದಿದೆ.


ಸರ್ವೋಚ್ಚ ನ್ಯಾಯಾಲಯ ಅ.1ರಂದು ಒಳ ಮೀಸಲಾತಿ ಕಲ್ಪಿಸುವ ಅಧಿಕಾರ ಮತ್ತು ಹೊಣೆಗಾರಿಕೆ ಆಯಾ ರಾಜ್ಯ ಸರ್ಕಾರಳಿಗಿದೆ ಎಂಬುದನ್ನು ಸ್ಪಷ್ಟವಾಗಿ ತಿಳಿಸಿದೆ. ಅದರ ಅನ್ವಯ ರಾಜ್ಯ ಸರ್ಕಾರ ಕೂಡಲೇ ಒಳ ಮೀಸಲಾತಿ ಸೌಲಭ್ಯ ಒದಗಿಸಬೇಕೆಂದು ವಕೀಲರು ಒತ್ತಾಯಿಸಿದರು.

ಸುಪ್ರೀಂ ಕೋರ್ಟ್‌ನ ಸಾಂವಿಧಾನಿಕ ಪೀಠ ನೀಡಿರುವ ತೀರ್ಪಿನಂತೆ ಕೂಡಲೇ ಒಳಮೀಸಲಾತಿ ಜಾರಿ ಮಾಡಬೇಕು. ಅಲ್ಲಿಯವರೆಗೆ ರಾಜ್ಯದಲ್ಲಿ ನಡೆಯುವ ಎಲ್ಲ ಸರ್ಕಾರಿ ಮತ್ತು ಅರೆ ಸರ್ಕಾರಿ ನೇಮಕಾತಿ ಸ್ಥಗಿತಗೊಳಿಸಬೇಕು.

ಹಣಕಾಸಿನ ಮತ್ತು ಇತರೆ ಸೌಲಭ್ಯ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವಕೀಲರಾದ ಬಿ.ಎಂ.ಹನುಮಂತಪ್ಪ, ಎಸ್. ರಾಜಪ್ಪ, ವೈ.ಹನುಮಂತಪ್ಪ ಜಗಳೂರು, ಎಸ್.ನೇತ್ರಾವತಿ, ಎಂ.ಎನ್.ನೇತ್ರಾವತಿ, ಬಿ.ಸ್ವಾತಿ, ಟಿ.ಹನುಮಂತಪ್ಪ, ಕೆ.ರಾಜಪ್ಪ, ಪರಶುರಾಮಪ್ಪ ಜಗಳೂರು, ಎ.ಎನ್. ಲಿಂಗಮೂರ್ತಿ, ಸುಭಾಶ್ಚಂದ್ರ ಭೋಸ್, ಜಿ.ಬಸವಾಜ, ಭೈರೇಶ್, ಡಿ.ಸಿ.ತಿಪ್ಪೇಸ್ವಾಮಿ ಜಗಳೂರು, ಅನಿಲ್‌ಕುಮಾರ್ ಚನ್ನಗಿರಿ, ಸುರೇಶ್‌ಕುಮಾರ್, ಮಂಜಪ್ಪ ಹಲಗೇರಿ, ಕೆ.ಡಿ.ಮರಿಯಪ್ಪ, ಶ್ಯಾಮ್, ಎಚ್.ಹನುಮಂತಪ್ಪ, ತಿಪ್ಪೇಸ್ವಾಮಿ ಜಿಟಿಎಸ್ ಜಗಳೂರು, ಎ.ಕೆ.ಹಾಲೇಶಪ್ಪ, ವೈ.ಸುರೇಶ್, ನಿವೃತ್ತ ಮುಖ್ಯ ಶಿಕ್ಷಕ ಎ.ಕೆ.ರಾಮಪ್ಪ ಸೇರಿದಂತೆ ಇನ್ನಿತರರಿದ್ದರು.

## ನಿರಾಶ್ರಿತರ ಬಾಳಲ್ಲಿ ಬೆಳಕು ತಂದ ಜಿಲ್ಲಾ ಆಸ್ಪತ್ರೆ



» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಗೋನೂರಿನಲ್ಲಿರುವ ನಿರಾಶ್ರಿತರ ಪರಿಹಾರ ಕೇಂದ್ರಕ್ಕೆ ಜಿಲ್ಲಾ ಆಸ್ಪತ್ರೆಯ ನೇತ್ರ ತಜ್ಞರು ಮತ್ತು ತಂಡದವರು ಕಾಲಕಾಲಕ್ಕೆ ಭೇಟಿ ನೀಡುತ್ತಿದ್ದು, ರಾಷ್ಟ್ರೀಯ ಅಂದತ್ವ ನಿವಾರಣ ಕಾರ್ಯಕ್ರಮದಡಿಯಲ್ಲಿ ನಿರಾಶ್ರಿತರ ನೇತ್ರ ಪರೀಕ್ಷೆ ಮಾಡಿ ದೃಷ್ಟಿ ದೋಷ ಹಾಗೂ ಕಣ್ಣಿನ ಪೊರೆ ಇರುವ 19 ಜನರಿಗೆ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆಯನ್ನು ನೇತ್ರ ತಜ್ಞ ಡಾ. ಪ್ರದೀಪ್ ಅವರು ಯಶಸ್ವಿಯಾಗಿ ಮಾಡಿ ನಿರಾಶ್ರಿತರಿಗೆ ಬೆಳಕು ನೀಡಿದ್ದಾರೆ. ಇದರ ಜೊತೆಗೆ ಅಗತ್ಯ ಮುಂಜಾಗ್ರತಾ ಕ್ರಮಗಳ ಕುರಿತು ಮಾಹಿತಿ ನೀಡಿರುತ್ತಾರೆ. ವೃದ್ಧರ ಬಾಳಿಗೆ ಬೆಳಕು ನೀಡಿದ ನೇತ್ರ ತಜ್ಞರಿಗೆ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಎಸ್.ಪಿ. ರವೀಂದ್ರ ಪ್ರಶಂಸಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ರವೀಂದ್ರ, ಆರ್‌ಎಂಒ ಡಾ.ಆನಂದ್ ಪ್ರಕಾಶ್, ನೇತ್ರ ತಜ್ಞರಾದ ಡಾ. ಶಿಲ್ಪ, ನೇತ್ರಾಧಿಕಾರಿ ಕೆ.ಸಿ ರಾಮು, ಪುಷ್ಪಲತಾ, ಡಿವೈಡಿಎಚ್‌ಇಓ ಸುನಂದಾದೇವಿ, ಶುಶ್ರೂಷಾಧಿಕಾರಿ ಲಕ್ಷ್ಮೀ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿ ಗಂಗಾಧರರೆಡ್ಡಿ, ಸಿಂಧು, ಶಾರದಾ, ಧರ್ಮೇಂದ್ರ, ಆರೋಗ್ಯ ನಿರೀಕ್ಷಣಾಧಿಕಾರಿ ಮಹೇಶ್ ಇದ್ದರು.

ಪ್ರಮುಖ ಸುದ್ದಿ

# ದತ್ತು ಪ್ರಕ್ರಿಯೆಗಳನ್ನು ತ್ವರಿತಗತಿಯಲ್ಲಿ ಪೂರೈಸಿ ಪೋಕ್ಸೋ, ಬಾಲ್ಯ ವಿವಾಹ ನಿಷೇಧ ಕುರಿತು ಜಾಗೃತಿ ಹೆಚ್ಚಿಸಲು ಸೂಚನೆ

» ದಾವಣಗೆರೆ



ಅನಾಥವಾಗಿರುವ ಮಕ್ಕಳನ್ನು ಹೆಚ್ಚು ದತ್ತು ಪ್ರಕ್ರಿಯೆಗೆ ಒಳಪಡಿಸಲು ಹಾಗೂ ಈ ಪ್ರಕ್ರಿಯೆಯನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಮಕ್ಕಳ ರಕ್ಷಣಾಧಿಕಾರಿಗೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಸೂಚನೆ ನೀಡಿದರು.

ಅವರು ಮಂಗಳವಾರ (ಅ.22) ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ 2ನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತಾನಾಡಿದರು. ಪೋಕ್ಸೋ ಪ್ರಕರಣದಲ್ಲಿ ದಾಖಲಾಗಿರುವ ಮಕ್ಕಳಿಗೆ ನ್ಯಾಯ ಒದಗಿಸಲು ಆರೋಪಿಗಳ ವಿರುದ್ಧ ತಕ್ಷಣ ಎಫ್.ಐ.ಆರ್ ದಾಖಲಿಸಬೇಕು. ಜಿಲ್ಲೆಯಲ್ಲಿ ಸಂಕಷ್ಟಗಳಿಗೆ ಒಳಗಾದ ಮಕ್ಕಳನ್ನು ಅನಾಥ, ಏಕಪೋಷಕ, ಶಾಲೆ ಬಿಟ್ಟ ಮಕ್ಕಳನ್ನು ಗುರುತಿಸಿ ಶಾಲೆಗಳಿಗೆ ದಾಖಲಿಸಿ, ಅವರ ವಿಧ್ಯಾಭ್ಯಾಸ ಮುಂದುವರಿಸುವಂತೆ ಕ್ರಮವಹಿಸುವ ಜೊತೆಗೆ ಪ್ರಗತಿಯ ಬಗ್ಗೆ ಪರಿಶೀಲನೆ ಮಾಡಬೇಕು. ಬಾಲನ್ಯಾಯ ಮಂಡಳಿ ಹಾಗೂ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಬಾಕಿ ಇರುವ ಮಕ್ಕಳ ಎಲ್ಲಾ ಪ್ರಕರಣಗಳನ್ನು ಒಂದು ತಿಂಗಳ ಒಳಗಾಗಿ ಇತ್ಯರ್ಥಗೊಳಿಸುವಂತೆ ತಿಳಿಸಿದರು.

ಬಾಲ್ಯವಿವಾಹ ಮಾಡುತ್ತಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಬಾಲ್ಯವಿವಾಹ ನಿಷೇಧ ಕಾಯ್ದೆಯಡಿ ದೂರು ದಾಖಲಿಸಬೇಕು. ಜಿಲ್ಲೆಯಲ್ಲಿ ಮಕ್ಕಳ ಸಮಸ್ಯೆಗಳು ಹೆಚ್ಚಾಗುತ್ತಿರುವುದರಿಂದ ಈ ಬಗ್ಗೆ ಹೆಚ್ಚಿನ ಮಟ್ಟದಲ್ಲಿ ಅರಿವು ಕಾರ್ಯಕ್ರಮ ಹಾಗೂ ಜಾಗೃತಿ ಮೂಡಿಸಬೇಕು. ಬಾಲಕಾರ್ಮಿಕ, ಮಕ್ಕಳ ಸಾಗಾಣಿಕೆ ಹಾಗೂ ಮಕ್ಕಳು ಕಾಣೆಯಾಗುತ್ತಿರುವ ಮಾಹಿತಿಯ ಕರೆ ಮಕ್ಕಳ ಸಹಾಯವಾಣಿಗೆ ಬಂದ ತಕ್ಷಣ ಹತ್ತಿರ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಸೂಚಿಸಿದರು.

ಶಾಲೆ ಬಿಟ್ಟ ಮಕ್ಕಳ ಮಾಹಿತಿಯನ್ನು ಪಡೆದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕರಿಗೆ ನೀಡಬೇಕು. ಶಿಕ್ಷಣ ಇಲಾಖೆಯಿಂದ ಶಾಲೆ ಬಿಟ್ಟಂತಹ ಮಕ್ಕಳನ್ನು ಗುರುತಿಸಿ ಮರು ಶಾಲೆಗೆ ದಾಖಲಿಸಲು ಕ್ರಮವಹಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ನಡೆಯುತ್ತಿರುವ ಬಾಲ್ಯವಿವಾಹ ಪ್ರಕರಣಗಳ ಮಾಹಿತಿ ಬಂದ ಕೂಡಲೇ ನಿಯಮಾನುಸಾರ ಕ್ರಮ ಕೈಗೊಳ್ಳಲು ಮತ್ತು ಅವಶ್ಯಕತೆ ಇರುವ ಮಕ್ಕಳಿಗೆ ಹಾಸ್ಟೆಲ್ ವ್ಯವಸ್ಥೆ ಹಾಗೂ ಶಾಲೆಗೆ ದಾಖಲಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದರು.

ಎಲ್ಲಾ ಇಲಾಖೆ ಅಧಿಕಾರಿಗಳು ಸಹ ಸಂಕಷ್ಟಗಳಿಗೆ ಒಳಗಾದ ಮಕ್ಕಳಿಗೆ ಪೋಷಣೆ, ರಕ್ಷಣೆ, ಒದಗಿಸಲು ಸಹಭಾಗಿತ್ವ ಮತ್ತು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಯಾವುದೇ ಅಧಿಕಾರಿಗಳು ಮಕ್ಕಳ ಕ್ಷೇತ್ರ, ಕಾರ್ಯದ ವಿಷಯದಲ್ಲಿ ಬೇಜವಾಬ್ದಾರಿತನ ಮತ್ತು ನಿರ್ಲಕ್ಷ್ಯತನ ತೋರಿದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವಿಜಯಕುಮಾರ್ ಎಂ. ಸಂತೋಷ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ, ಪಾಲಿಕೆ ಆಯುಕ್ತರಾದ ರೇಣುಕಾ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಎತ್ತಿನ ಇರಿತಕ್ಕೆ ಬಲಿಯಾದ ರೈತ ರಾಜಪ್ಪ

» ಚಳ್ಳಕೆರೆ



ತಾಲ್ಲೂಕಿನ ಕರೀಕೆರೆ ಗ್ರಾಮದಲ್ಲಿ ಎತ್ತಿನ ಇರಿತದಿಂದ ಗಾಯಗೊಂಡ ರೈತನೊಬ್ಬ ಮೃತಪಟ್ಟ ಘಟನೆ ನಡೆದಿದೆ. ಗ್ರಾಮದ ರೈತ ರಾಜಪ್ಪ(55) ತನ್ನ ಜಮೀನಿನಲ್ಲಿ ಎತ್ತುಗಳನ್ನು ಮೇಯಿಸುವ ಸಂದರ್ಭದಲ್ಲಿ ಒಂದು ಎತ್ತುಗೆ ಹೊಡೆದಾಗ ಕೂಡಲೇ ಅದು ವಾಪಾಸ್ ತಿರುಗಿ ಕೋಡಿನಿಂದ ರಾಜಪ್ಪನ ಬೆನ್ನಿಗೆ ತಿವಿದಿದೆ. ಕೂಡಲೇ ನೆರೆಹೊರೆಯವರು ಆಗಮಿಸಿ ಗಾಯಗೊಂಡ ರಾಜಪ್ಪನನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದ್ದಾರೆ. ಪರೀಕ್ಷೆ ನಡೆಸಿದ ವೈದ್ಯರು ರಾಜಪ್ಪ ಮೃತಪಟ್ಟಿರುವುದಾಗಿ ತಿಳಿಸಿದ್ದು, ರಾಜಪ್ಪನ ಪತ್ನಿ ನಿಂಗಮ್ಮ ಪೊಲೀಸ್‌ರಿಗೆ ದೂರು ನೀಡಿದ್ದು, ಆಕಸ್ಮಿಕ ಘಟನೆಯಿಂದ ನನ್ನ ಪತಿ ಮರಣಹೊಂದಿದ್ದಾರೆಂದು ತಿಳಿಸಿದ್ದಾರೆ. ಎಎಸ್‌ಐ ಗೋವಿಂದರಾಜು ಪ್ರಕರಣ ದಾಖಲಿಸಿದ್ದಾರೆ.

### ಪುರಸಭೆ ಮುಖ್ಯಾಧಿಕಾರಿ ಮೇಲೆ ಆರೋಪ ಸಲ್ಲದು



» ಹೊಸದುರ್ಗ

ಪುರಸಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯಾಧಿಕಾರಿ ತಿಮ್ಮರಾಜು.ಜಿ.ವಿ ರವರು ಪುರಸಭೆಯ ಅಧ್ಯಕ್ಷರ ಜೊತೆ ಅ.21 ಸೋಮವಾರ ರಂದು ನಡೆದ ಸಾಮಾನ್ಯ ಸಭೆಯಲ್ಲಿ ನಾನು ಮಹಿಳೆಯೆಂದು ತಿಳಿಯದೇ ಪರಿಷ್ಕಿತ ಪಂಗಡದವಳು ಎಂದು ಭಾವಿಸಿ ಏಕವಚನದಲ್ಲಿ ಏರು ಧ್ವನಿಯಲ್ಲಿ ಸಭೆ ನಡೆಯುತ್ತಿರುವಾಗ ಸದಸ್ಯರ ಮುಂದೆ ದುರ್ವತನೆ ತೋರಿರುತ್ತಾರೆ, ಹಲವು ಭಾರಿ ನಾನು ಕಛೇರಿಗೆ ಬಂದಾಗ ಅಸಭ್ಯವಾಗಿ ವರ್ತನೆ ತೋರಿ ನನಗೆ ಮತ್ತು ಉಪಾಧ್ಯಕ್ಷರಿಗೆ, ಸದಸ್ಯರಿಗೆ ಗೌರವ ನೀಡುವುದಿಲ್ಲ ಎಂಬುದಾಗಿ ಮುಖ್ಯಾಧಿಕಾರಿಯವರ ಮೇಲೆ ಆರೋಪಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿರುವುದು ಖಂಡನೀಯ ಎಂದು ಪುರಸಭಾ ಮಹಿಳಾ ಸಿಬ್ಬಂಧಿಗಳು ಅಧ್ಯಕ್ಷರು, ಸದಸ್ಯರ ಬಗ್ಗೆ ತೀರ್ವ ಬೇದರ ವ್ಯಕ್ತಪಡಿಸಿದ್ದಾರೆ.ಈ ವಿಚಾರವಾಗಿ ಪುರಸಭೆಯ ಮಹಿಳಾ ಸಿಬ್ಬಂಧಿಗಳು ಪುರಸಭೆಯ ಮುಂದೆ ನಿಂತು ಬುಧವಾರ ಸಂಜೆ ಪ್ರತಿಭಟಿಸಿದ ಘಟನೆ ಜರುಗಿತು.ಪುರಸಭೆ ಮಹಿಳಾ ಸಿಬ್ಬಂದಿ ಸಾವಿತ್ರಿ ಮಾತನಾಡಿ ಸದರಿ ವಿಚಾರವನ್ನು ಪುರಸಭೆಯ ಎಲ್ಲಾ ಮಹಿಳಾ ಸಿಬ್ಬಂದಿಗಳು ಮತ್ತು ಮಹಿಳಾ ಕಾರ್ಮಿಕರು ಅತ್ಯಂತ ಕಟೋರವಾಗಿ ಕಂಡಿಸುತ್ತೇವೆ ಸದರಿ ಸಭೆಯಲ್ಲಿ ನಾವೂ ಸಹ ಹಾಜರಿದ್ದು ಎಲ್ಲರಿಗೂ ಗೌರವ ನೀಡಿ ಸಭೆಯಲ್ಲಿ ಹಾಜರಿದ್ದು ಎಲ್ಲಾ ಸದಸ್ಯರಿಗು, ಸಿಬ್ಬಂದಿಗಳಿಗು ಗೌರವಿತವಾಗಿ ಯಾವುದೇ ರೀತಿ ಅಸಭ್ಯವಾಗಿ ನಡೆದುಕೊಂಡಿರುವುದಿಲ್ಲ ಹಾಗೂ ಸಭೆಯಲ್ಲಿ ಕಂಡಿಸದೇ ಹಾಗೂ ಹೇಳದೆ ಕೇಳದೆ ಜಿಲ್ಲಾಧಿಕಾರಿಗಳಿಗೆ ಕೆಲವೇ ಕೆಲವು ಸದಸ್ಯರು ಹಾಗೂ ಅಧ್ಯಕ್ಷರು, ಉಪಾಧ್ಯಕ್ಷರು ಮನವಿ ಸಲ್ಲಿಸಿ ದ್ದಾರೆ, ಕಳೆದ 5–6 ವರ್ಷಗಳಿಂದ ಮುಖ್ಯಾಧಿಕಾರಿಯವರ ಜೊತೆಯಲ್ಲಿ ಕೆಲಸ ನಿರ್ವಹಿಸಿದ್ದು ಮಹಿಳೆಯರಿಗೆ ಅಕ್ಕ ಅಥವಾ ತಾಯಿ ಎಂದು ಸಂಬೋದಿಸದೇ ಯಾರನ್ನೂ ಸಹ ಮಾತನಾಡಿಸುವುದಿಲ್ಲ ಎಲ್ಲಾ ವಿಚಾರಗಳಲ್ಲು ಮಹಿಳೆಯರಿಗೆ ಆಧ್ಯತೆ ನೀಡುತ್ತಾರೆ ಅತ್ಯಂತ ಪ್ರೀತಿ ಪೂರ್ವಕವಾಗಿ ನಡೆದುಕೊಳ್ಳುತ್ತಾರೆ ಹಾಗೂ ಯಾರಿಗೂ ಸಹ ಏಕವಚನದಲ್ಲಿ ಮಾತನಾಡಿದ ವ್ಯಕ್ತಿಯೇ ಆಗಿರುವುದಿಲ್ಲ ಪ್ರತಿ ಒಬ್ಬರಿಗೂ ಅಣ್ಣ ಅಥವಾ ಅಕ್ಕ ಎಂದು ಹೇಳದೆ ಇರುವುದಿಲ್ಲ ಬಂದಂತಹ ಸಾರ್ವಜನಿಕರಿಗೂ ಗೌರವಿಸಿ ಟೀ ಕಾಫೀ ನೀಡಿ ಕುಳಿತುಕೋಳ್ಳಲು ಹೇಳಿ ಕೆಲಸಗಳನ್ನು ಮಾಡುವಂತಹ ಸೌಜನ್ಯ ಉಳ್ಳ ವ್ಯಕ್ತಿಯಾಗಿದ್ದು ಇಂತಹ ವ್ಯಕ್ತಿಯ ವಿರುದ್ಧ ನೀಡಿರುವ ಹೇಳಿಕೆಯನ್ನು ನಾವು ಉಗ್ರವಾಗಿ ಖಂಡಿಸುವುದರ ಜೊತೆಗೆ ಎಲ್ಲಾ ಸಿಬ್ಬಂದಿಗಳು, ಕಾರ್ಮಿಕರು ಚರ್ಚಿಸಿ ಹೋರಾಟದ ಪ್ರಕ್ರಿಯೆಯನ್ನು ಮುಂದುವರೆಸುತ್ತೇವೆ ಎಂದರು. ಮಹಿಳಾ ಪೌರಕಾರ್ಮಿಕಿ ಹೊನ್ನಮ್ಮ ಮಾತನಾಡಿ ದೂರಿನಲ್ಲಿ ದೂರಿರುವ ಎಲ್ಲಾ ಸದಸ್ಯರು ಬೇಷರತ್ ಕ್ಷಮೆ ಯಾಚಿಸುವವರೆಗೂ ಹೋರಾಟ ಮುಂದುವರೆಸುತ್ತೇವೆ ಕೆಲ ಸದಸ್ಯರು ಕಾರ್ಮಿಕರನ್ನು ಗುಲಾಮರಂತೆ ನಡೆಸುಕ್ಕೊಳ್ಳುವುದು ಸಭಾಂಗಣಕ್ಕೆ ಕಾರ್ಮಿಕರು ಬರುವುದನ್ನು ನಿರ್ಭಂದಿಸುವುದು ಕನ್ನಿಷ್ಟ 2 ತಿಂಗಳು ಪೂರ್ಣಗೊಂಡರು ಕಾರ್ಮಿಕರ ಜೊತೆ ಸೌಜನ್ಯಕ್ಕು ಸಹ ಮಾತನಾಡದ ಅಧ್ಯಕ್ಷರು, ಸದಸ್ಯರ ನಡವಳಿಕೆಯನ್ನು ವಿರೋಧಿಸುತ್ತೇವೆ ಎಂದು ಎಚ್ಚರಿಸಿದರುಈ ಸಂದರ್ಭದಲ್ಲಿ ಕಿರಿಯ ಅಭಿಯಂತರರಾದ ಬಿಂದು, ಆರೋಗ್ಯ ನಿರೀಕ್ಷಕಿ ಕಲ್ಪನ.ಟಿ, ಸುಮನ, ಅಶ್ವಥಮ್ಮ, ಸುಂದರಮ್ಮ, ಗೀತಾ, ಅಶ್ವಿನಿ, ಅಶ್ವಿನಿ, ಪೌರಕಾರ್ಮಿಕಿಯರಾದ ರೇಖಾ, ಮಂಜಮ್ಮ ಹಾಗೂ ಇತರೆ ಮಹಿಳಾ ಸಿಬ್ಬಂದಿಗಳು ಹಾಜರಿದ್ದರು

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಕುಕ್ಕವಾಡ ಮತ್ತು ಶ್ಯಾಗಲೆ ವಿದ್ಯುತ್ ವಿತರಣ ಕೇಂದ್ರದಲ್ಲಿ ತುರ್ತು ಕಾಮಗಾರಿ ಹಮ್ಮಿಕೊಂಡಿರುವುದರಿಂದ ಅ.24 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಕುಕ್ಕವಾಡ, ಕೊಲಕುಂಟೆ, ಗಿರಿಯಾಪುರ, ಕೈದಾಳೆ, ಹದಡಿ, ಕಲಬಂಡೆ ವಿದ್ಯುತ್ ವ್ಯತ್ಯಯವಾಗಲಿದೆ.

---

ಆಯುರ್ವೇದ ದಿನಾಚರಣೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ಎಸ್.ನಾಗಸಮುದ್ರ

# ಔಷಧಿ ಸಸ್ಯಗಳ ಸಂರಕ್ಷಣೆ ಎಲ್ಲರ ಹೊಣೆ

» ಚಿತ್ರದುರ್ಗ



ಭಾರತೀಯ ಸಸ್ಯಗಳಲ್ಲಿ ಆರನೇ ಒಂದು ಭಾಗವು ಔಷಧೀಯ ಗುಣಗಳನ್ನು ಹೊಂದಿದೆ. ಆದರೆ ಅವುಗಳ ಅಳಿವಿನ ಅಪಾಯವು ದೊಡ್ಡದಾಗಿದೆ. ಔಷಧೀಯ ಸಸ್ಯಗಳ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ಎಸ್ ನಾಗಸಮುದ್ರ ಅಭಿಪ್ರಾಯ ಪಟ್ಟರು.

ನಗರದ ಕೆಳಗೋಟೆಯ ಈಶ್ವರೀಯ ವಿಶ್ವವಿದ್ಯಾಲಯದ ಸಭಾ ಭವನದಲ್ಲಿ 9ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಅಂಗವಾಗಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಕಾರ್ಯಕ್ರಮ ಉದ್ಘಾಟಿಸಿ "ಜಾಗತಿಕ ಆರೋಗ್ಯಕ್ಕಾಗಿ ಆಯುರ್ವೇದದ ಆವಿಷ್ಕಾರಗಳು ಮತ್ತು ಪರಿಸರ ರಕ್ಷಣೆ ಸಸ್ಯ ಹಾಗೂ ಪ್ರಾಣಿಗಳ ಸಂರಕ್ಷಣೆಯಲ್ಲಿ ಆಯುರ್ವೇದದ ಪಾತ್ರ" ಎಂಬ ವಿಷಯ ಕುರಿತು ಅವರು ಮಾತನಾಡಿದರು.

ಅಮೃತ ಆಯುರ್ವೇದ ಕಾಲೇಜಿನ ಡಾ.ವೀರೇಶ್ ಆಯುರ್ವೇದ ಮತ್ತು ಪರಿಸರದ ಸಂಬಂಧ ಕುರಿತು ಮಾತನಾಡಿ, ಆಯುರ್ವೇದ ಮತ್ತು ಪರಿಸರ ಸಸ್ಯಸಂಕುಲ ಪ್ರಾಣಿಗಳ ಜೊತೆಗೆ ನೇರವಾದ ಸಂಬಂಧ ಹೊಂದಿವೆ. ಆದ್ದರಿಂದ ಆಯುರ್ವೇದ ಮತ್ತು ಪರಿಸರದ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಪರಿಸರ ಸಂರಕ್ಷಣೆಯಲ್ಲಿ ಆಯುರ್ವೇದವು ಪ್ರಮುಖ ಪಾತ್ರ ವಹಿಸುತ್ತದೆ. ಏಕೆಂದರೆ ರಾಸಾಯನಿಕ ರಹಿತ ಬೆಳೆ ಬೆಳೆಯುವ ಸಸ್ಯಗಳನ್ನು ಪೋಷಿಸಿ ಸಸ್ಯಗಳ ರೋಗಗಳನ್ನು ಗುಣಪಡಿಸಿ ಸಂರಕ್ಷಣೆ ಮಾಡುವ ವಿಧಾನ ತಿಳಿಸುವ ಆಯುರ್ವೇದ ಪದ್ಧತಿಯ ಮಣ್ಣನ್ನು ಸಂರಕ್ಷಿಸಿ ಭೂಮಿಯ ಫಲವತ್ತತೆ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಆಯುರ್ವೇದ ಪದ್ಧತಿಯ ಬಗ್ಗೆ ರೈತರಗೆ, ಸಾರ್ವಜನಿಕರಿಗೆ ಆಯುರ್ವೇದ ಪದ್ಧತಿಯ ಬಗ್ಗೆ ತಿಳಿಯಪಡಿಸಿ ಔಷಧೀಯ ಸಸ್ಯಗಳ ರಕ್ಷಣೆ ಅದರಲ್ಲೂ ಔಷಧೀಯ ಗುಣಗಳನ್ನು ಹೊಂದಿರುವ ಸಸ್ಯಗಳ ಸಂರಕ್ಷಣೆ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಚಿತ್ರದುರ್ಗ ಜಿಲ್ಲಾ ಆಯುಷ್ ಇಲಾಖೆಯು ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಉಪಯುಕ್ತ ಹಾಗೂ ಶ್ಲಾಘನೀಯ ಎಂದರು.

ಜೆ.ಎನ್.ಕೋಟೆ ಆಯುಷ್ ಚಿಕಿತ್ಸಾಲಯದ ಆಡಳಿತ ವೈದ್ಯಾಧಿಕಾರಿ ಡಾ. ಪಿ.ವಿಜಯಲಕ್ಷ್ಮೀ, 'ಮಹಿಳಾ ಸಬಲೀಕರಣಕ್ಕಾಗಿ ಆಯುರ್ವೇದ' ಎಂಬ ವಿಷಯ ಕುರಿತು ಮಾತನಾಡಿ, ಮಹಿಳೆಯರ ಸಮಸ್ಯಗಳಾದ ಪಿಸಿಓಎಸ್, ಪಿಸಿಓಡಿ, ಒತ್ತಡ ನಿರ್ವಹಣೆ, ಮತ್ತು ಆಯುರ್ವೇದದ ಆಧಾರದಲ್ಲಿ ಮಹಿಳೆಯರ ಆರೋಗ್ಯದ ಸುಧಾರಣೆಗಾಗಿ ಹೆಚ್ಚಿನದಾಗಿ ಕೇಂದ್ರೀಕರಿಸಲು ಮಹಿಳೆಯರ ಆರೋಗ್ಯ ಸಮಸ್ಯಗಳ ಮೇಲೆ ಹೆಚ್ಚು ಪರಿಣಾಮ ಬೀರುವ ಔಷಧೀಯ ಗುಣಗಳನ್ನು ಹೊಂದಿದ ಸಸ್ಯಗಳ ಸಂರಕ್ಷಣೆಯನ್ನು ಚಿತ್ರದುರ್ಗ ಜಿಲ್ಲಾ ಆಯುಷ್ ಇಲಾಖೆಯು ಬೆಂಬಲಿಸುತ್ತಾ ಬಂದಿದೆ. ಆಯುರ್ವೇದ ಆಧಾರಿತ ಸಂಶೋಧನೆಯ ಮೂಲಕ ಮಹಿಳಾ ಸಬಲೀಕರಣವನ್ನು ಆಯುಷ್ ಇಲಾಖೆ ಉತ್ತೇಜಿಸುತ್ತದೆ. ಮಹಿಳೆಯರು ತಮ್ಮ ಸಮಸ್ಯೆಗಳ ಬಗ್ಗೆ ಹತ್ತಿರದ ಆಯುಷ್ ಇಲಾಖೆಯ ಚಿಕಿತ್ಸಾಲಯಗಳಿಗೆ ಭೇಟಿ ನೀಡಿ ಆಯುಷ್ ವೈದ್ಯರಲ್ಲಿ ಮುಕ್ತವಾಗಿ ಚರ್ಚಿಸಿ ಸಮಸ್ಯಗಳಿಗೆ ಪರಿಹಾರ ಪಡೆಯಬಹುದಾಗಿದೆ ಎಂದು ತಿಳಿಸಿದರು.

ಹಿರಿಯೂರು ತಾಲ್ಲೂಕಿನ ಸೊಂಡೆಕೊಳ ಆಯುಷ್ ಚಿಕಿತ್ಸಾಲಯದ ವೈದ್ಯಾಧಿಕಾರಿ ಡಾ.ನಾಗರಾಜ್ ನಾಯಕ್ ಮಾತನಾಡಿ, ಔಷಧಿ ಸಸ್ಯಗಳ ಮಹತ್ವ ಹಾಗೂ ಆಯುರ್ವೇದ ಪದ್ಧತಿಗೆ ಅವುಗಳ ಉಪಯೋಗವನ್ನು ಸಾರ್ವಜನಿಕರಿಗೆ ತಿಳಿಸಿದರು. ಆಯುರ್ವೇದ ಪದ್ಧತಿಯು ರೋಗಿಗಳಿಗೆ ತಲುಪಬೇಕಾದರೆ ಔಷಧಿ ಸಸ್ಯಗಳು ಬಹಳ ಮುಖ್ಯ. ಹೇಗೆ ನಾವು ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುತ್ತೇವೆ ಅದೇ ರೀತಿ ಸಸ್ಯಗಳ ಆರೋಗ್ಯವನ್ನು ಸಹ ನಾವು ಕಾಪಾಡಬೇಕಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬ್ರಹ್ಮಕುಮಾರಿ ರೋಹಿಣಿ, ರಶ್ಮಿ, ಅಮೃತ ಆಯುರ್ವೇದ ಕಾಲೇಜಿನ ಡಾ. ವೀರೇಶ್, ಆಯುಷ್ ಇಲಾಖೆಯ ಯೋಗ ತರಬೇತುದಾರ ರವಿ ಕೆ.ಅಂಬೇಕರ್ ಇನ್ನಿತರರು ಉಪಸ್ಥಿತರಿದ್ದರು.

---

## ದೊಡ್ಡ ಉಳ್ಳಾರ್ತಿ ಉನ್ನತ್ತೀಕರಿಸಿದ ಶಾಲೆ ದುಸ್ಥಿತಿ

**ಶಾಲೆಯ ಎಲ್ಲಾ ಕೊಠಡಿಗಳಲ್ಲಿ ಸೋರಿರುವ ಮಳೆ ನೀರು : ಶಿಕ್ಷಣಾಧಿಕಾರಿಗಳೇ ಇತ್ತ ಗಮನಹರಿಸಿ**

» ಚಳ್ಳಕೆರೆ



ಇತ್ತೀಚೆಗೆ ತಾಲ್ಲೂಕಿನಾದ್ಯಂತ ಚಿತ್ತಮಳೆ ಸಮೃದ್ಧವಾಗಿ ಸುರಿದಿದ್ದು, ಎಲ್ಲೆಡೆ ಮಳೆಯ ನೀರು ಹರಿಯುವ ದೃಶ್ಯವನ್ನು ಕಣ್ತುಂಬಿಕೊಂಡು ಸಂತೋಷಪಡುವ ಸಂದರ್ಭದಲ್ಲೂ ಸಹ ಮಳೆಯಿಂದ ಆದ ಅನಾಹುತದ ಬಗ್ಗೆ ಗಮನಸೆಳೆಯುವಂತೆ ಗ್ರಾಮಸ್ಥರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ತಾಲ್ಲೂಕಿನ ತಳಕು ಹೋಬಳಿಯ ದೊಡ್ಡ ಉಳ್ಳಾರ್ತಿ ಸರ್ಕಾರಿ ಉನ್ನತ್ತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆ ಮಳೆಯ ನೀರಿನಿಂದ ಅಡುಗೆಕೋಣೆಯೂ ಸೇರಿದಂತೆ ಶಾಲೆಯ ಎಲ್ಲಾ ಕೊಠಡಿಗಳು ಸೋರುತ್ತಿವೆ. ಶಾಲೆಯ ತುಂಬೆಲ್ಲಾ ಮಳೆಯ ನೀರು ನಿಂತು ವಿದ್ಯಾರ್ಥಿಗಳು ಶಾಲೆಗೆ ಆಗಮಿಸಿ ತರಗತಿತೆರಳು ಚಿಂತನೆ ಮಾಡಬೇಕಾಗಿದೆ. ಎಲ್ಲಾ ಕೊಠಡಿಗಳಲ್ಲಿ ಮಳೆ ನೀರು ನಿಂತಿದ್ದು ಮಳೆಯ ನೀರಿನಲ್ಲೇ ವಿದ್ಯಾರ್ಥಿಗಳು ಕುಳಿತು ಪಾಠ ಕೇಳುವ ದುಸ್ಥಿತಿ ಇದೆ. ಇದರಿಂದ ವಿದ್ಯಾರ್ಥಿಗಳಿಗೆ ಆತಂಕ ಉಂಟಾಗಿದೆ. ಸರ್ಕಾರ ಕೂಡಲೇ ಸೋರುತ್ತಿರುವ ಕೊಠಡಿಗಳನ್ನು ದುರಸ್ಥಿಪಡಿಸಬೇಕಲ್ಲದೆ, ಶಾಲಾ ಮೈದಾನದಲ್ಲಿ ನೀರು ನಿಲ್ಲದಂತೆ ಮೈದಾನವನ್ನು ಎತ್ತರಗೊಳಿಸಬೇಕಂದು ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಪೆದ್ದಯ್ಯ ಆಗ್ರಹಿಸಿದ್ದಾರೆ. ಗ್ರಾಮಗಳಲ್ಲಿ ತುರ್ತು ಸಂದರ್ಭದಲ್ಲಿ ಶಾಲೆಯ ದುರಸ್ಥಿತಿಗೆ ಗ್ರಾಮ ಪಂಚಾಯಿತಿಯಲ್ಲಿ 15ನೇ ಹಣಕಾಸು ಯೋಜನೆಯಲ್ಲಿ ಹಣ ಮೀಸಲಿದ್ದರೂ ಸಹ ಇಲ್ಲಿನ ಪಂಚಾಯಿತಿ ಆಡಳಿತ ಶಾಲೆಯ ದುಸ್ಥಿತಿಯನ್ನು ಕಂಡೂಕಾಣದಂತೆ ವರ್ತನೆ ಮಾಡುತ್ತಿರುವುದುರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅಡ್ಡಿಯಾಗಲಿದೆ. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳು ಕೂಡಲೇ ಗ್ರಾಮದ ಶಾಲೆಗೆ ಭೇಟಿ ನೀಡಿ ಅವ್ಯವಸ್ಥೆಯನ್ನು ಸರಿಪಡಿಸುವಂತೆ ಅವರು ಮನವಿ ಮಾಡಿದ್ದಾರೆ. ಈಗಾಗಲೇ ಕ್ಷೇತ್ರ ಶಿಕ್ಷಣಾಧಿಕಾರಿ, ಶಾಸಕರಿಗೆ ಶಾಲೆಯ ಸ್ಥಿತಿಗತಿಯ ಬಗ್ಗೆ ಲಿಖಿತಮೂಲಕ ಮನವಿ ಮಾಡಿಕೊಳ್ಳಲಾಗಿದೆ. ನಮ್ಮ ಮನವಿಗೆ ತಾಲ್ಲೂಕು ಆಡಳಿತ ಸಕರಾತ್ಮಕವಾಗಿ ಸ್ಪಂದಿಸಿ ಇಲ್ಲವಾದರೆ ವಿದ್ಯಾರ್ಥಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡಿ ಆಗುತ್ತಿರುವ ತೊಂದರೆ ನಿವಾರಣೆ ಮಾಡುತ್ತಾರೆಂದು ಭಾವಿಸಿದ್ದೇವೆ. ಕೂಡಲೇ ಅಧಿಕಾರಿಗಳು ಗಮನಹರಿಸಬೇಕೆಂದರು.

---

## ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತರ ವಿಭಾಗದ ಹುದ್ದೆಗಳಿಗೆ ನೇಮಕ



» ಚಿತ್ರದುರ್ಗ

ಜಿಲ್ಲಾ ಕಾಂಗ್ರೆಸ್ ಪಕ್ಷದ ಸಂಘಟನೆ ಬಲಪಡಿಸುವ ಉದ್ದೇಶದಿಂದ ಮತ್ತು ಮುಂದಿನ ದಿನಗಳಲ್ಲಿ ಜಿಲ್ಲಾ ಪಂಚಾಯತಿ ಮತ್ತು ತಾಲೂಕು ಪಂಚಾಯಿತಿ ಹಾಗೂ ಪಟ್ಟಣ ಪಂಚಾಯತಿ ಪುರಸಭೆ ಮತ್ತು ನಗರ ಸಭೆ ಚುನಾವಣೆಗಳು ಇರುವ ಹಿನ್ನಲೆಯಲ್ಲಿ ಮುಂದಿನ ದಿನಮಾನಗಳಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಆಡಳಿತ ರೂಢವಾಗಿ ತರುವ ಉದ್ದೇಶದಿಂದ ಅಲ್ಪಸಂಖ್ಯಾತರ ವಿಭಾಗಕ್ಕೆ ಮೊಳಕಾಲ್ಮೂರು ಹೊಳಲ್ಕೆರೆ ಭರಮಸಾಗರ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ವಿವಿಧ ಹುದ್ದೆಗಳಿಗೆ ಕಾಂಗ್ರೆಸ್ನ ಸಂಘಟನಾ ಕಾರ್ಯಕರ್ತರನ್ನು ನೇಮಕ ಮಾಡಿ ಆದೇಶ ಪತ್ರವನ್ನು ನೀಡಲಾಯಿತು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ ಕೆ ತಾಜಪೀರ್, ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತರ ವಿಭಾಗ ಅಧ್ಯಕ್ಷ ಸೈಯದ್ ಖುದ್ದುಸ್ , ಜಿಲ್ಲೆಯ ತಾಲೂಕು ಅಧ್ಯಕ್ಷರ ನೇಮಕ ಮಾಡಿ ಆದೇಶದ ಪತ್ರವನ್ನು ಹಸ್ತಾಂತರ ಮಾಡಿದರು.ಹೊಳಲ್ಕೆರೆ ನಗರಕ್ಕೆ ಅಲ್ಲಭಕಾಶ ಖಾನ್, ಮಾಜಿ ನಗರಸಭಾ ಸದಸ್ಯರು, ಹೊಳಲ್ಕೆರೆ ಗ್ರಾಮಾಂತರಕ್ಕೆ ರಶೀದ್, ಭರಮ ಸಾಗರ, ಹೋಬಳಿ, ಮೊಳಕಾಲ್ಮೂರು ಗ್ರಾಮಾಂತರ ದಿಂದ ಮಹಮ್ಮದ್ ರಫೀಕ್ ಇವರುಗಳನ್ನು ನೇಮಕ ಮಾಡಲಾಯಿತು. ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳನ್ನಾಗಿ ಫ್ರಾನ್ಸಿಸ್, ಅರುಣ್, ಡಿಸೋಜಾ, ಮೊಹಮ್ಮದ್ ಇರ್ಫಾನ್, ಅಬ್ದುಲ್ ಫಾರೂಕ್, ಮೊಹಮ್ಮದ್ ಉಸ್ಮಾನ್ ರವರನ್ನು ನೇಮಕ ಮಾಡಿ ಆದೇಶ ಪತ್ರ ನೀಡಲಾಯಿತು. ಈ ಸಂದರ್ಭದಲ್ಲಿ ಪದವಿದಾರರ ಅಧ್ಯಕ್ಷ ಪ್ರಕಾಶ್ ರಾಮ ನಾಯಕ್, ಎನ್ ಡಿ ಕುಮಾರ್ ಉಪಸುತ್ತರಿದ್ದರು.

---

## ಐಟಿಐ ನೇರ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ದಾವಣಗೆರೆ: ಪ್ರಸಕ್ತ ಸಾಲಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಜಗಳೂರು ಇಲ್ಲಿ ಐಟಿಐ ಕೋರ್ಸ್ ಗಳಲ್ಲಿ ಖಾಲಿ ಇರುವ ಸ್ಥಾನಗಳ ಪ್ರವೇಶಕ್ಕಾಗಿ ಎಸ್ ಎಸ್ ಎಲ್ ಸಿ ಪಾಸಾದ ಅಭ್ಯರ್ಥಿಗಳಿಂದ ನೇರ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಐ.ಟಿ & ಇ.ಎಸ್.ಎಂ, ಎಂ.ಎಂ.ವಿ, ಎಂ.ಆರ್&ಎ.ಸಿ ಅಡ್ವಾನ್ಸಾಡ್ ಸಿ.ಎನ್.ಸಿ ಮೆಕ್ಯಾನಿಕ್ ಡೀಸೆಲ್ ಮತ್ತು ಡ್ರೆಸ್ ಮೇಕಿಂಗ್ ವೃತ್ತಿಗಳಲ್ಲಿ ಖಾಲಿ ಉಳಿದ ಸೀ□□ಗಳ ಪ್ರವೇಶಕ್ಕಾಗಿ ಅಕ್ಟೋಬರ್ 30 ರವರೆಗೆ ಆಫ್ ಲೈನ್ ಮೂಲಕ ಪ್ರವೇಶ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:08196–227110 ನ್ನು ಸಂಪರ್ಕಿಸಲು ಸಂಸ್ಥೆಯ ಪ್ರಾಚಾರ್ಯರರು ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

# ಹಿರಿಯೂರು ರೈತರು ಹಿನ್ನೀರಿನ ಪ್ರದೇಶಕ್ಕೆ ಭೇಟಿ ನೀಡಿ ರೈತರ ಪರಿಸ್ಥಿತಿ ನೋಡ ಬನ್ನಿ: ಶಾಸಕ ಬಿ.ಜಿ.ಗೋವಿಂದಪ್ಪ

» ಹೊಸದುರ್ಗ



ಹಿರಿಯೂರು ತಾಲ್ಲೂಕಿನ ರೈತರು ಹೊಸದುರ್ಗ ತಾಲ್ಲೂಕಿನ ವಿವಿ ಸಾಗರ ಜಲಾಶಯದ ಹಿನ್ನೀರಿನ ಗ್ರಾಮಗಳಿಗೆ ಭೇಟಿ ನೀಡಿ,ಪರಿಸ್ಥಿತಿ ನೋಡ ಬನ್ನಿ. ನಾವೆಲ್ಲರೂ ಒಂದುಗೂಡಿ ರೈತರ ಸಂಕಷ್ಟಕ್ಕೆ ಪರಿಹಾರ ಕಂಡುಕೊಳ್ಳಬೇಕು. ಒಮ್ಮೆ ಹಿರಿಯೂರಿನ ರೈತ ಸಂಘದವರು ಹಿನ್ನೀರಿನ ಗ್ರಾಮಗಳಿಗೆ ಭೇಟಿ ನೀಡುವಂತೆ ಶಾಸಕ ಬಿ.ಜಿ. ಗೋವಿಂದಪ್ಪ ಆಹ್ವಾನವಿತ್ತರು.

ಪಟ್ಟಣದ ಕಾಂಗ್ರೆಸ್ ಭವನದಲ್ಲಿ ಬುಧವಾರ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಾಣಿ ವಿಲಾಸ ಸಾಗರ ಜಲಾಶಯದ ನೀರಿನ ಮಟ್ಟ ಈಗಾಗಲೇ 126 ಅಡಿಗೆ ತಲುಪಿದ್ದು, ಕೋಡಿ ಬೀಳುವ ಹಂತದಲ್ಲಿದೆ. 2022 ರಲ್ಲಿ ಕೋಡಿ ಬಿದ್ದಾಗ ತಾಲ್ಲೂಕಿನ ಹಿನ್ನೀರಿನ ಜನತೆ ಅಪಾರ ನಷ್ಟ ಅನುಭವಿಸಿದ್ದರು. ವಿವಿ ಸಾಗರದ ಜಲಾಶಯದ 25.ಸಾವಿರ ಎಕರೆ ಹೊಸದುರ್ಗ ತಾಲೂಕಿನ ವ್ಯಾಪ್ತಿಗೆ ಸೇರಿದ್ದು, ಭೂಮಿ ನೀಡಿರುವುದು ನಮ್ಮ ರೈತರ ಉದಾರ ಗುಣ. ಆದರಿಂದು ಅದೇ ಹಿನ್ನೀರಿನಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ವಿವಿ ಸಾಗರ ಜಲಾಶಯ ಪಕ್ಕದಲ್ಲಿಯೇ ಇದ್ದರೂ, ಹಿನ್ನೀರಿನ ಅಂಚಿನಲ್ಲಿರುವ ತಾಲ್ಲೂಕಿನ ಜನರಿಗೆ ನೀರು ದೊರೆಯುತ್ತಿಲ್ಲ. ಅಂತರ್ಜಲ ಮಟ್ಟವೂ ಸಹ ವೃದ್ಧಿಸುತ್ತಿಲ್ಲ. ಕೆರೆ, ಬಾವಿ, ಕೊಳವೆಬಾವಿ ಹಾಗೂ ಜಮೀನುಗಳಲ್ಲಿಯೂ ನೀರಿಲ್ಲ. 700 ಅಡಿ ಕೊಳವೆಬಾವಿ ಕೊರೆಯಿಸಿದರೂ ನೀರು ದೊರೆಯುತ್ತಿಲ್ಲ. ವಿವಿ ಸಾಗರದ ಭರ್ತಿಯಿಂದ ಒಂದು ಕಡೆ ಸಂತಸ, ಮತ್ತೊಂದೆಡೆ ಸಂಕಟವಿದೆ. ರಾಜಕೀಯ ಪಕ್ಷ ಭೇದ ಮರೆತು, ಎಲ್ಲಾ ರೈತರು ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು. ಎರಡೂ ಕಡೆ ರೈತರು ವಿಶ್ವಾಸಯುತವಾಗಿ ನಡೆದುಕೊಳ್ಳುವಂತಾಗಬೇಕು ಎಂದರು.

ಹಿಂದೆ ಮಹಾರಾಜರು ಭೂಮಿ ಕೊಟ್ಟ ರೈತರಿಗೆ ಪರಿಹಾರವನ್ನು ನೀಡಿದ್ದಾರೆ. ಆದರೀಗ, ವಿವಿ ಸಾಗರ ಜಲಾಶಯ ಭರ್ತಿಯಾದರೇ, ಖಾತೆ ಜಮೀನುಗಳಿಗೆ ಮತ್ತು ಕೆಲ ಊರುಗಳಿಗೆ ನೀರು ನುಗ್ಗುತ್ತದೆ, ತೇವಾಂಶ ಹೆಚ್ಚಾಗಿ ಮನೆ ಗೋಡೆಗಳು ಸಹ ಬಿರುಕು ಬಿಡುತ್ತವೆ ಎಂದು ಹೇಳಿದರು.

***ಗೇಟ್ ಅಳವಡಿಸಲು ಮನವಿ:** ವಿವಿ ಸಾಗರದ ಜಲಾಶಯದ ನೀರು 130 ಅಡಿಯೇ ಇರಲಿ, ಅದಕ್ಕೇನು ನಮ್ಮ ತಕರಾರು ಇಲ್ಲ, 134 ಅಡಿ ತಲುಪಿದಾಗ ನೀರನ್ನು ಗೇಟ್ ಮೂಲಕ ಹೊರಹಾಕಿ. ಕೆ.ಆರ್.ಎಸ್. ಸೇರಿದಂತೆ ಇತರೆ ಕಡೆಗಳ ಡ್ಯಾಂ ಗಳಿಗೆ ಗೇಟ್ ಅಳವಡಿಸಲಾಗಿದೆ. ಅದರಂತೆಯೇ ವಿಶ್ವೇಶ್ವರಯ್ಯ ಜಲ ನಿಗಮದವರ ಬಳಿ ಚರ್ಚಿಸಿ, 120 ಕೋಟಿ ರೂ.ವೆಚ್ಚದಲ್ಲಿ ಗೇಟ್ ನಿರ್ಮಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಹೆಚ್ಚಾದ ನೀರನ್ನು ಗೇಟ್ ಮೂಲಕ ಹೊರಹಾಕಿ, ಕೋಡಿ ಬಾಯಿಂದ ನೀರು ಹೋಗುವುದನ್ನು ತಪ್ಪಿಸಬೇಕು ಎಂದರು.

**ಮತ್ತೋಡು, ಮಾಡದಕೆರೆ ಹೋಬಳಿಗೆ ನೀರು ಕಲ್ಪಿಸಿ:** ಹಿನ್ನೀರಿನ ಅಂಚಿನಲ್ಲಿರುವ ಮತ್ತೋಡು ಹಾಗೂ ಮಾಡದಕೆರೆ ಹೋಬಳಿಯ ಗ್ರಾಮಗಳ ಭೂಮಿ ಹಾಗೂ ಕೆರೆಗಳಿಗೆ ವಿವಿ ಸಾಗರದ ನೀರು ನೀಡುವ ಕೆಲಸ ಆಗಬೇಕು. ಈ ಬಗ್ಗೆ ಸಮೀಕ್ಷೆ ನಡೆಸಿ, ಸ್ಥಳ ಪರಿಶೀಲನೆ ಮಾಡಿ, ಸರ್ಕಾರಕ್ಕೆ ವರದಿ ನೀಡಲಾಗುವುದು ಎಂದು ಹೇಳಿದರು. ಹಿರಿಯೂರು ರೈತರಿಂದ ನಮ್ಮ ಮನವಿಗೆ ಸ್ಪಂದನೆ ದೊರೆಯದಿದ್ದಲ್ಲಿ, ತಾಲ್ಲೂಕಿನ ರೈತರೊಂದಿಗೆ ಸಮಾಲೋಚನೆ ನಡೆಸಿ, ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು. ಕಾನೂನು ಪ್ರಕಾರ ಹೋರಾಟ ಮಾಡಲಾಗುವುದು ಎಂದರು.

### ಲಕ್ಷ್ಮೀ ಸಿಮೆಂಟ್ ವಿರುದ್ಧ ಕಾನೂನು ಹೋರಾಟ

ತಾಲ್ಲೂಕಿನ ಇಟ್ಟಿಗೆ ಹಳ್ಳಿಯಲ್ಲಿನ ಲಕ್ಷ್ಮೀ ಸಿಮೆಂಟ್ ಕಾರ್ಖಾನೆಯೂ ಈ ಹಿಂದೆ 33 ವರ್ಷಗಳ ಅವಧಿಗೆ ಒಪ್ಪಂದ ಮಾಡಿಕೊಂಡಿತ್ತು. ಆದರೀಗ ಅವಧಿ ಮುಗಿದಿದ್ದು, ನೇರವಾಗಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದಲೇ ಪುನಃ ಅನುಮತಿ ಪಡೆಯಲಾಗಿದೆ. ಈ ಕಾರ್ಖಾನೆಯಿಂದಾಗಿ ತಾಲ್ಲೂಕಿನ ಜನತೆ ಹಾಗೂ ಉತ್ತರೆ ಗುಡ್ಡ ಸಮೀಪವಿರುವ ವನ್ಯ ಜೀವಿಗಳಿಗೆ ತೊಂದರೆಯಾಗುತ್ತದೆ. ಇದರಲ್ಲಿನ 400 ಎಕರೆ ಭೂಮಿ ತಾಲ್ಲೂಕಿನ ಜನತೆಗೆ ನೀಡುವ ಉದ್ದೇಶದಿಂದ ಹಾಗೂ ತಪ್ಪಿತಸ್ಥರ ವಿರುದ್ಧ ಕಾನೂನು ಹೋರಾಟ ಮಾಡಲಾಗುವುದು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.

## ಫಾಸ್ಟ್ ನ್ಯೂಸ್

### ತಾಲ್ಲೂಕಿನಾದ್ಯಂತ ಮುಂದುವರೆದ ಚಿತ್ತಮಳೆಯ ಹಾವಳಿ: ಲಕ್ಷಾಂತರ ಮೌಲ್ಯದ ಬೆಳೆ ಹಾಗೂ ಮನೆ ಮಳೆಗೆ ಆಹುತಿ





» ಚಳ್ಳಕೆರೆ

ತಾಲ್ಲೂಕಿನಾದ್ಯಂತ ಚಿತ್ತಮಳೆ ತನ್ನ ರೌದ್ರಾವತಾರವನ್ನು ಮುಂದುವರೆಸಿದ್ದು, ಎಲ್ಲೆಡೆ ಕೆರೆ,ಕಟ್ಟೆ ತುಂಬಿ ನೀರು ಹರಿಯುತ್ತಿದೆ. ತಾಲ್ಲೂಕಿನ ಬಹುತೇಕ ರಸ್ತೆಗಳು ನೀರಿನಿಂದ ಆವೃತ್ತವಾಗಿ ಸಾರ್ವಜನಿಕರು ಹಾಗೂ ವಾಹನ ಸವಾರರಿಗೆ ಪ್ರತಿನಿತ್ಯ ತೊಂದರೆ ಅನುಭವಿಸಬೇಕಾದ ಸ್ಥಿತಿ ಉಂಟಾಗಿದೆ. ನಗರದ ಪಾವಗಡ ರಸ್ತೆಯಲ್ಲಿ ಹರಿಯುತ್ತಿರುವ ರಭಸವಾದ ನೀರಿನಲ್ಲಿ ರಸ್ತೆದಾಟಲು ಮುಂದಾದಗ ಟ್ರ್ಯಾಕ್ಟರ್ ಹಾಗೂ ಆಟೋರಿಕ್ಷಾ ನೀರಿನ ರಭಸಕ್ಕೆ ತೇಲಿಹೋಗುತ್ತಿದ್ದು, ಪೊಲೀಸ್ ಹಾಗೂ ಸಾರ್ವಜನಿಕರ ಸಹಕಾರದಿಂದ ಎರಡೂ ವಾಹನಗಳನ್ನು ದಡಕ್ಕೆ ತೆರಲಾಗಿದೆ. ಇಬ್ಬರೂ ಚಾಲಕರು ಹಾರಿತಮ್ಮ ಪ್ರಾಣವನ್ನು ಉಳಿಸಿಕೊಂಡಿದ್ದಾರೆ. ನಗರದ ಕರೇಕಲ್ ಕೆರೆಯ ಕೋಡಿಹರಿಯುವ ಜಾಗವನ್ನು ತಾಲ್ಲೂಕು, ಸಣ್ಣ ನೀರಾವರಿ ಇಲಾಖೆ ಸಹಕಾರೊಂದಿಗೆ ಸುಮಾರು ಮೂರುಅಡಿಗಳಷ್ಟು ಕೆರೆಕೋಡಿಯನ್ನು ಮೂರುಅಡಿ ತೆಗೆದಿದ್ದು, ನೀರು ಸರಾಗಹರಿಯುತ್ತಿದೆ. ಇದರಿಂದ ಸಧ್ಯದ ಸ್ಥಿತಿಯಲ್ಲಿ ಅಪಾಯದಿಂದ ಪಾರಾದಂತಾಗಿದೆ. ಕೆರೆ ಏರಿಯಲ್ಲಿ ಕಾಣಿಸಿಕೊಂಡ ಎರಡೂ ರಂಧ್ರಗಳನ್ನು ನೀರಾವರಿ ಇಲಾಖೆ ಪರಿಶೀಲಿಸಿದ್ದು ಶೀಘ್ರದಲ್ಲೇ ಅವುಗಳನ್ನು ಮುಚ್ಚಲಾಗುವುದು ಎಂದು ತಿಳಿಸಿದ್ದಾರೆ. ತಾಲ್ಲೂಕಿನ ತಳಕು ಹೋಬಳಿಯ ಲಂಬಾಣಿಹಟ್ಟಿಯಲ್ಲಿ ರೆಡ್ಡಿನಾಯ್ಕ ಎಂಬುವವರ ಮನೆಯಲ್ಲಿ ಸುಮಾರು 10ಕ್ಕೂ ಹೆಚ್ಚು ಜನರು ವಾಸವಿದ್ದು ಮಳೆಯಿಂದ ಸಂಪೂರ್ಣ ಮನೆ ಕುಸಿದಿದೆ. ಮಲ್ಲೂರಹಳ್ಳಿಯಲ್ಲಿ ಚಿನ್ನಮ್ಮ ಎಂಬುವವರ ಮನೆ ಕುಸಿದು 50 ಸಾವಿರ ನಷ್ಟವಾಗಿದೆ. ಚನ್ನಮ್ಮನಾಗತಿಹಳ್ಳಿ ಚನ್ನರಾಯಪ್ಪ ಎಂಬುವವರ ಮನೆ ಕುಸಿದು 80 ಸಾವಿರನಷ್ಟವಾಗಿದೆ. ಕರೀಕೆರೆ ಗ್ರಾಮದ ಲೋಕೇಶ್, ಗೌಡಗೆರೆ ಗ್ರಾಮದ ಶಿವಮೂರ್ತಿ, ಮಮ್ಮೆನಹಟ್ಟಿಯ ಜಯಲಕ್ಷ್ಮಿ ಮನೆ ಕುಸಿದು ತಲಾ 35 ಸಾವಿರ ನಷ್ಟವಾಗಿದೆ. ಕುದಾಪುರ ಬಸವನಾಯಕ, ಗುಂಡಪ್ಪ, ಮಲ್ಲೂರಹಟ್ಟಿಯ ಜಯಮ್ಮ, ಉಗ್ರಪ್ಪ, ಪಾಂಡುನಾಯ್ಕ ಮನೆಗಳು ಗೋಡೆ ಕುಸಿದು ಸುಮಾರು 1.60 ಲಕ್ಷ ನಷ್ಟ ಉಂಟಾಗಿದೆ. ಪಿ.ಮಹದೇವಪುರ ಚನ್ನಮ್ಮ ಎಂಬುವವರ 3.18 ಎಕರೆ ಜಮೀನಿನಲ್ಲಿದ್ದ ಶೇಂಗಾ ಬೆಳೆ ನೀರಿನಲ್ಲಿ ಕೊಚ್ಚಿಹೋಗಿ ಲಕ್ಷಾಂತರ ನಷ್ಟ ಸಂಭವಿಸಿದೆ. ನಾಯಕನಹಟ್ಟಿ ಚಂದ್ರಪ್ಪ ಎಂಬುವವರ ಸುಮಾರು 2 ಎಕರೆ ರಾಗಿಬೆಳೆಯಲ್ಲಿ ನೀರು ನಿಂತು ಸಂಪೂರ್ಣ ಬೆಳೆ ಹಾನಿಯಾಗಿದೆ. ಮಳೆಯಿಂದ ಹಾನಿಯಾದ ಪ್ರದೇಶಕ್ಕೆ ತಹಶೀಲ್ದಾರ್ ರೇಹಾನ್‌ಪಾಷ ಹಾಗೂ ಕಂದಾಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಸುಸ್ಥಿರ ಕೃಷಿ ತರಬೇತಿ

» ದಾವಣಗೆರೆ

ಜಿಲ್ಲಾ ಕೃಷಿ ತರಬೇತಿ ಕೇಂದ್ರ ಕಾಡಜ್ಜಿ, ಇಲ್ಲಿ ಅಕ್ಟೋಬರ್ 29 ರಂದು ಜಿಲ್ಲೆಯ ರೈತರಿಗೆ ಸುಸ್ಥಿರ ಕೃಷಿ-ಸ್ವಾವಲಂಭಿ ಜೀವನಕ್ಕಾಗಿ ನೂತನ ತಾಂತ್ರಿಕತೆಗಳ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಪ್ರಗತಿ ಪರ ರೈತರು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹುಲಿಕೆರೆಯ ವಿಶ್ವೇಶ್ವರ ಹೆಚ್ ಸಜ್ಜನ್, ತರಳಬಾಳು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ.ದೇವರಾಜ್ ಟಿ.ಎನ್. ಬೇಸಾಯ ತಜ್ಞರಾದ ಮಲ್ಲಿಕಾರ್ಜುನ ಬಿ.ಓ, ತೋಟಗಾರಿಕಾ ತಜ್ಞರಾದ ಬಸವನಗೌಡ ಎಂ.ಜಿ ಇವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು. ಸುಸ್ಥಿರ ಕೃಷಿಗೆ ಪೂರಕವಾಗಿ ಇಲಾಖೆಯಿಂದ ದೊರೆಯುವ ಯೋಜನೆಗಳ ಕುರಿತು ಮಾಹಿತಿಯನ್ನು ಉಪ ಕೃಷಿ ನಿರ್ದೇಶಕರಾದ ತಿಪ್ಪೇಸ್ವಾಮಿ. ಆರ್ ತರಬೇತಿಯಲ್ಲಿ ವಿಷಯ ಮಂಡಿಸುವರು. ತರಬೇತಿಯಲ್ಲಿ ಭಾಗವಹಿಸಲು 35 ರೈತರಿಗೆ ಮಾತ್ರ ಅವಕಾಶವಿದೆ. ಆಸಕ್ತ ರೈತ, ರೈತ ಮಹಿಳೆಯರು ಅ.26 ರೊಳಗಾಗಿ ಮೊ.ಸಂಖ್ಯೆ: 9844295795, 9901640184 ಗೆ ಸಂಪರ್ಕಿಸಿ ನೋಂದಾಯಿಸಲು ಹಾಗೂ ತರಬೇತಿಯಲ್ಲಿ ಭಾಗವಹಿಸುವ ರೈತರು ಕಡ್ಡಾಯವಾಗಿ ಎ□□ಐಡಿ ಸಂಖ್ಯೆ ಅಥವಾ ಚುನಾವಣಾ ಗುರುತಿನ ಚೀಟಿಯೊಂದಿಗೆ ಹಾಜರಾಗಬೇಕೆಂದು ತಿಳಿಸಿದ್ದಾರೆ.

ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ

# ಹನಿ ನೀರಾವರಿ ಅಳವಡಿಕೆಯಿಂದ ಇಳುವರಿ ವೃದ್ಧಿ

» ಚಿತ್ರದುರ್ಗ




ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ತುಂತುರು ಮತ್ತು ಹನಿ ನೀರಾವರಿ ಘಟಕಗಳ ಅಳವಡಿಕೆಯಿಂದ ಇಳುವರಿ ವೃದ್ಧಿ ಹಾಗೂ ಆರ್ಥಿಕಾಭಿವೃದ್ಧಿ ಸಾಧ್ಯ ಎಂದು ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ಹೇಳಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಸೋಮವಾರ ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕಿನ ಕಸಬಾ ಹೋಬಳಿ ರೈತರಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ತುಂತುರು ಮತ್ತು ಹನಿ ನೀರಾವರಿ ಘಟಕಗಳ ಅಳವಡಿಕೆ ಮತ್ತು ನಿರ್ವಹಣೆ ಕುರಿತು ಆಯೋಜಿಸಲಾದ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತುಂತುರು ಮತ್ತು ಹನಿ ನೀರಾವರಿ ಪದ್ಧತಿಗಳ ಅಳವಡಿಕೆಯಿಂದ ಕೃಷಿಯಲ್ಲಿ ಶೇ.30 ರಿಂದ 40 ನೀರಿನ ಉಳಿತಾಯ, ಸಮಯದ ಉಳಿತಾಯ, ಕಳೆಗಳ ನಿರ್ವಹಣೆ ಮತ್ತು ರೋಗಗಳ ಹರಡುವಿಕೆ ತಡೆಗಟ್ಟಬಹುದು. ನೀರು ಉಣಿಸಲು ಮತ್ತು ರಸಗೊಬ್ಬರ ಕೊಡಲು ಆಳುಗಳ ಕೊರತೆ ನೀಗಿಸಬಹುದು. ಇದರಿಂದ ಮಣ್ಣು ಮತ್ತು ನೀರಿನ ಸಂರಕ್ಷಣೆ ಜೊತೆಗೆ ವ್ಯವಸಾಯದ ಖರ್ಚು ಕಡಿಮೆಯಾಗಿ ಉತ್ತಮ ಇಳುವರಿ ಪಡೆಯಲು ಸಾಧ್ಯ ಎಂದರು. ಕೃಷಿ ಇಲಾಖೆಯಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಎಲ್ಲಾ ವರ್ಗದ ರೈತರಿಗೆ ಶೇ 90 ಸಹಾಯಧನದಲ್ಲಿ ಸ್ಪ್ರಿಂಕ್ಲರ್ ಸೆಟ್ ಪಡೆಯಲು ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿಯನ್ನು ಸಲ್ಲಿಸಿ ಈ ಯೋಜನೆಯ ಅನುಕೂಲ ಪಡೆದುಕೊಳ್ಳಬಹುದು. ಈ ಘಟಕಗಳನ್ನು ಕ್ಷೇತ್ರ ಮಟ್ಟದಲ್ಲಿ ಅಳವಡಿಸಲು ಮತ್ತು ಅವುಗಳ ನಿರ್ವಹಣೆಗೆ ಇಂದಿನ ತರಬೇತಿಯು ಸಹಕಾರಿಯಾಗಿದ್ದು, ತರಬೇತಿಯ ಸದುಪಯೋಗ ಪಡೆದುಕೊಳ್ಳಲು ತಿಳಿಸಿದರು.ಬಬ್ಬೂರು ತೋಟಗಾರಿಕೆ ಇಂಜಿನಿಯರಿಂಗ್ ವಿಭಾಗ ಸಹಾಯಕ ಪ್ರಾಧ್ಯಾಪಕ ಡಾ. ರಾಜಶೇಖರ ಡಿ ಭಾರ್ಕೆರ್ ಅವರು ನೀರಿನ ಸಮರ್ಥ ಬಳಕೆ, ಹನಿ ನೀರಾವರಿ ಮತ್ತು ಸ್ಪ್ರಿಂಕ್ಲರ್ ಘಟಕಗಳ ಉಪಯೋಗ ಮತ್ತು ಅವುಗಳ ನಿರ್ವಹಣೆಯ ಕುರಿತು ವಿಷಯ ಮಂಡನೆ ಮಾಡಿದರು. ವೆಂಕಟೇಶ್ವರಅಗ್ರಿ ಮತ್ತು ಹಾರ್ಟಿ ಸಲೂಷನ್ಸ್ ದಾವಣಗೆರೆ ಪ್ರತಿನಿಧಿಯಾದ ಅನಿಲ್ ಕುಮಾರ್ ಅವರು ಕ್ಷೇತ್ರ ಮಟ್ಟದಲ್ಲಿ ಸ್ಪ್ರಿಂಕ್ಲರ್‌ಸೆಟ್ ಘಟಕ ಅಳವಡಿಕೆ ವಿಧಾನ ಮತ್ತು ಅವುಗಳ ಸಮರ್ಪಕ ನಿರ್ವಹಣೆ ಕುರಿತು ಮಾಹಿತಿ ಮತ್ತು ಪ್ರಾತ್ಯಕ್ಷಿಕೆಯ ಮೂಲಕ ತಿಳಿಸಿಕೊಟ್ಟರು.

ನೀರಾವರಿ ತಜ್ಞರು ಮತ್ತು ಸಲಹೆಗಾರ ಬೇಸಾಯಶಾಸ್ತ್ರ ನಿವೃತ್ತ ಪ್ರಾಧ್ಯಾಪಕ ಡಾ.ಬಿ.ಜಿ.ಶಶಿಧರ ಅವರು ಸಾಲು ಕೃಷಿ ಬೆಳೆಗಳಲ್ಲಿ ಹನಿ ನೀರಾವರಿ ಪದ್ಧತಿಯ ಕುರಿತು ವಿಷಯ ಮಂಡನೆ ಮಾಡಿ, ಈ ಪದ್ಧತಿಯಲ್ಲಿ ನೀರನ್ನು ಹನಿ ಹನಿಯಾಗಿ ಬೆಳೆಗಳ ಬೇರಿನ ವಲಯದಲ್ಲಿ ಒದಗಿಸಲಾಗವುದು. ನೀರಿನ ಕೊರತೆ ಇರುವ ಸಂದರ್ಭಗಳಲ್ಲಿ ಹಾಗೂ ಕ್ಷಾರಯುಕ್ತ ಜಮೀನುಗಳಲ್ಲಿ ಈ ಪದ್ಧತಿಯ ಅಳವಡಿಕೆ ಅತೀ ಉತ್ತಮ. ಇತರೆ ನೀರಾವರಿ ಪದ್ಧತಿಗಳಲ್ಲಿ ನೀರು ಬೇರಿನ ವಲಯಕ್ಕಿಂತ ಆಳವಾಗಿ ಇಂಗುವುದರಿಂದ ಹಾಗೂ ಆವಿಯಾಗಿ ಹೋಗುವುದರಿಂದ ಆಗುವ ನಷ್ಟವನ್ನು ಈ ಪದ್ಧತಿಯಿಂದ ಕಡಿಮೆಗೊಳಿಸಬಹುದೆಂದರು. ಈ ವಿಧಾನದಲ್ಲಿ ನೀರು ಜಿನುಗಿಸುವ ಸಾಧನಗಳನ್ನೊಳಗೊಂಡ ಕಡಿಮೆ ವ್ಯಾಸದ ಪ್ಲಾಸ್ಟಿಕ್ ಕೊಳವೆಗಳನ್ನು ಉಪಯೋಗಿಸಿ ಬೆಳೆಗಳಿಗೆ ನೀರುಣಿಸಲಾಗುತ್ತದೆ. ಈ ವಿನ್ಯಾಸವನ್ನುತಾವು ನಿವೃತ್ತಿ ಹೊಂದುವ ಮೊದಲುಕಾರ್ಯನಿರ್ವಹಿಸುತ್ತದ್ದ ಧಾರವಾಡ ಕೃಷಿ ವಿಶ್ವವಿದ್ಯಾಲಯದ ನೀರಾವರಿ ನೀರು ಸಂಶೋಧನಾ ಕೇಂದ್ರ, ಬೆಳವಟಗಿಯಲ್ಲಿ ಅಭಿವೃದ್ಧಿಪಡಿಸಲಾಗಿದೆಂದರು. ಈ ವಿನ್ಯಾಸವು ಬಹುತೇಕಎಲ್ಲಾ ಕೃಷಿ ಬೆಳೆಗಳಿಗೆ ಅಳವಡಿಸಲು ಸೂಕ್ತವಾಗಿದೆ. ಅಲ್ಲದೇ ಈ ಹನಿ ನೀರಾವರಿ ಸಾಧನವನ್ನು ಭೂಮಿಯ ಮೇಲ್ಮನಲ್ಲಿಇರಿಸಲಾಗಿದ್ದು ಸುಲಭವಾಗಿತೆಗೆದುಜೋಡಿಸಬಹುದು. ಇದರಿಂದ ಬಿತ್ತುವುದುದರಿಂದಕಟಾವು ಮಾಡುವುದದವರೆಗಿನ ಎಲ್ಲಾ ಕೃಷಿ ಚಟುವಟಿಕೆಗಳನ್ನು ಎತ್ತಿನಿಂದಅಥವಾ ಟ್ರ್ಯಾಕ್ಟರ್‌ನಿಂದ ಮಾಡಲು ಸೂಕ್ತವಾಗಿದೆ. ಈ ಹೊಸ ವಿನ್ಯಾಸವನ್ನು "ಧಾರವಾಡ ಕೃಷಿ ವಿಶ್ವವಿದ್ಯಾಲಯ ಮಾದರಿ" ಎಂದೇ ಹೆಸರಿಸಲಾಗಿದೆಂದರು.

ಸಾಲು ಕೃಷಿ ಬೆಳೆಗಳಲ್ಲಿ ಹನಿ ನೀರಾವರಿ ಪದ್ಧತಿಯನ್ನುಪ್ರಮುಖಮು ಂಗಾರು ಬೆಳೆಗಳಾದ ಗೋವಿನಜೋಳ, ಸೂರ್ಯಕಾಂತಿ, ಶೇಂಗಾ, ತೊಗರಿ, ಈರುಳ್ಳಿ, ಮೆಣಸಿನಕಾಯಿ ಹೆಸರು ಬೆಳೆಗಳಲ್ಲಿನ ಮತ್ತು ಹಿಂಗಾರಿನಲ್ಲಿ ಗೋದಿ, ಕಡಲೆ, ಮತ್ತುಅವರೆ ಬೆಳೆಗಳಲ್ಲಿ ಸೂಕ್ತವಾಗಿ ಅಳವಡಿಸಿಕೊಳ್ಳಬಹುದೆಂದರು.

ಈ ಪದ್ಧತಿಯಲ್ಲಿ ಶೇ. 40 ರಷ್ಟು ನೀರನ್ನು ಉಳಿತಾಯ ಮಾಡುವುದಲ್ಲದೇ ಶೇ. 20-30 ರಷ್ಟು ಹೆಚ್ಚಿಗೆ ಇಳುವರಿಯನ್ನು ಪಡೆಯಬಹುದು.ಈಬೆಳೆಗಳಿಗೆಡ್ರಿಪರ್‌ನಲ್ಲಿ (ಇನ್ ಲೈನ್ ಡ್ರಿಪರ್-ಒಳ ಸೇರಿರುವ ಹನಿ ಸಾಧಕ) ನೀರು ಹರಿಯುವ ಪ್ರಮಾಣ 4 ಲೀ ಘಂಟೆಗೆ, ಎರಡು ಡ್ರಿಪರ್‌ಗಳ ನಡುವಿನ ಅಂತರ 40 ಸೆಂ.ಮೀ. ಹಾಗೂ ಎರಡು ಲ್ಯಾಟ್ರಲ್ ನಡುವಿನ ಅಂತರ 60 ಸೆಂ.ಮೀ. ನಂತೆ ಜೋಡಿಸಿ ಬೆಳೆಯಬಹುದು. ಮುಂಗಾರು ಬೆಳೆಗಳಿಗೆ ನೀರನ್ನು ಪ್ರತಿ ನಾಲ್ಕು ದಿನಗಳಿಗೊಮ್ಮೆ ಮತ್ತು ಹಿಂಗಾರು ಬೆಳೆಗಳಿಗೆ ಪ್ರತಿ ಏಳು ದಿನಗಳಿಗೊಮ್ಮೆ ನೀರು ಆವಿಯಾಗುವಪಟ್ಟು ಪ್ರಮಾಣಕ್ಕನುಸಾರವಾಗಿ ಹನಿ ನೀರಾವರಿಯಲ್ಲಿ ನೀರು ಕೊಡಬೇಕೆಂದರು. ತರಬೇತಿಯಲ್ಲಿ ಮೊಳಕಾಲ್ಮೂರು ತಾಲ್ಲೂಕಿನ ಆಸಕ್ತ 60 ಜನ ರೈತಬಾಂಧವರು ಭಾಗವಹಿಸಿದ್ದರು.

## ವೀರರಾಣಿ ಕಿತ್ತೂರುರಾಣಿ ಚನ್ನಮ್ಮ ಹೋರಾಟ ಮಹಿಳಾ ಸಮುದಾಯಕ್ಕೆ ಸ್ಫೂರ್ತಿ : ತಹಶೀಲ್ದಾರ್

» ಚಳ್ಳಕೆರೆ



ನೂರಾರು ವರ್ಷಗಳ ಹಿಂದೆ ನಮ್ಮನ್ನಾಳಿದ ಎಲ್ಲಾ ಮಹಾರಾಜರು ಪ್ರಜೆಗಳ ಹಿತಕ್ಕಾಗಿ ಪ್ರಾಣತ್ಯಾಗವನ್ನು ಮಾಡಲು ಹಿಂದೇಟು ಹೊಡೆದವರಲ್ಲ. ಯಾವುದೇ ರೀತಿಯ ಕಷ್ಟಗಳನ್ನು ಧೈರ್ಯದಿಂದ ಎದುರಿಸಿ ಪ್ರಜೆಗಳನ್ನು ರಕ್ಷಿಸಿದ ಕೀರ್ತಿ ಅವರದ್ದು. ಅಂತಹ ಮಹಾನ್‌ತ್ಯಾಗಿಗಳಲ್ಲಿ ಕಿತ್ತೂರು ಸಂಸ್ಥಾನದ ಕಿತ್ತೂರು ರಾಣಿ ಚನ್ನಮ್ಮ ಅಗ್ರಗಣ್ಯರು ಎಂದು ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದರು.

ಅವರು, ನಗರದ ವೀರಶೈವ ಕಲ್ಯಾಣಮಂಟಪದಲ್ಲಿ ವೀರಶೈವ ಸಂಘಟನಗಳು ಹಮ್ಮಿಕೊಂಡಿದ್ದ ಕಿತ್ತೂರು ರಾಣಿ ಚನ್ನಮ್ಮ ಜಯಂತ್ಯೋತ್ಸವವನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಪರವಾಗಿ ಉದ್ಘಾಟಿಸಿ ಮಾತನಾಡಿದರು. ಇತಿಹಾಸದಲ್ಲಿ ಎಂದೂ ಮರೆಯಲಾರದಂತಹ ಮಹಾನ್ ಕಾರ್ಯವನ್ನು ದಾಖಲಿಸುವಲ್ಲಿ ಕಿತ್ತೂರುರಾಣಿಚನ್ನಮ್ಮ ಪ್ರಮುಖರು. ಅಂದು ಮಹಿಳೆಯರು ಕೇವಲ ಅಡುಗೆ ಮನೆಗೆ ಮಾತ್ರ ಸೀಮಿತವಾಗಿದ್ದರೂ ಸಹ ವೀರರಾಣಿಕಿತ್ತೂರು ಚನ್ನಮ್ಮ ಕೆಚ್ಚೆದೆಯ ಕಲಿಯಾಗಿ ಹೋರಾಟ ನಡೆಸಿದ ಎಲ್ಲರಿಗೂ ಸ್ಫೂರ್ತಿಯಾದರು ಎಂದರು.

ವೀರಶೈವಲಿಂಗಾಯಿತ ಪಂಚಮಸಾಲಿ ಸಂಘದ ಅಧ್ಯಕ್ಷ ಕೆ.ಟಿ.ಶಿವಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ರಾಜ್ಯ ಸರ್ಕಾರ ಕಿತ್ತೂರು ರಾಣಿಚನ್ನಮ್ಮ ಜಯಂತ್ಯೋತ್ಸವದ ಮೂಲಕ ಅವರ ಹೋರಾಟ, ತ್ಯಾಗಬಲಿದಾನವನ್ನು ನಿರಂತರವಾಗಿ ನೆನಪಿಸುವ ಕಾರ್ಯವನ್ನು ಮಾಡಿದೆ. ಇಡೀ ಮಹಿಳಾ ಸಮುದಾಯಕ್ಕೆ ಕಿತ್ತೂರುರಾಣಿಚನ್ನಮ್ಮ ಸದಾಆದರ್ಶಪ್ರಾಯರು. ಎದುರಾಳಿಗಳನ್ನು ತಮ್ಮ ಮಾತಿನದಾಟಿಯಿಂದಲೇ ಕಟ್ಟಿಹಾಕುತ್ತಿದ್ದ ಚನ್ನಮ್ಮ ಕಿತ್ತೂರು ಸಂಸ್ಥಾನದ ಉಳಿವಿಗೆ ಶ್ರಮಿಸಿದವರು. ನಾವೆಲ್ಲರೂ ಅವರ ಆದರ್ಶಗಳ ಪಾಲನೆಯಲ್ಲಿ ದೃಢಹೆಜ್ಜೆ ಇಡೋಣವೆಂದರು.

ಕಾರ್ಯಕ್ರಮದಲ್ಲಿ ಅಖಿಲಭಾರತವೀರಶೈವ ಮಹಾಸಭಾದ ತಾಲ್ಲೂಕು ಅಧ್ಯಕ್ಷ ಡಿ.ಜೆ. ಕಿರಣ್‌ಶಂಕರ್, ಎಚ್.ವಿ.ಪ್ರಸನ್ನಕುಮಾರ್, ಕೆ.ಎಂ. ಜಗದೀಶ್, ಪ್ರಕಾಶ್, ಲೋಕೇಶ್, ಗೌರವಾಧ್ಯಕ್ಷ ಕೆ.ಬಸವರಾಜ(ವಂದನ), ಎ.ವಿಜಯೇಂದ್ರ, ಕೆ.ಈಶ್ವರಪ್ಪ, ಎನ್.ಶಂಕರ್, ಎನ್.ರವಿಕುಮಾರ್, ಪಿ.ಜಗದೀಶ್ ಭಾಗವಹಿಸಿದ್ದರು.

## ಅಂಬೇಡ್ಕರ್‌ರವರ ಬದುಕಿನ ಮೌಲ್ಯಗಳು ಸಮಾಜಕ್ಕೆ ಆಧಾರ



» ಚಳ್ಳಕೆರೆ

ರಾಜ್ಯದ ಶೈಕ್ಷಣಿಕ ಕ್ಷೇತ್ರದಲ್ಲಿ ನಿರೀಕ್ಷೆಗೂ ಮೀರಿ ಹೆಚ್ಚಿನ ಬದಲಾವಣೆ ಆರಂಭವಾಗಿವೆ. ಪ್ರಸ್ತುತ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್‌ರವರ ಮಾರ್ಗದರ್ಶನದಲ್ಲಿ ಶೈಕ್ಷಣಿಕ ಕ್ಷೇತ್ರದಲ್ಲಿ ಹಲವಾರು ಬದಲಾವಣೆಗಳನ್ನು ಮಾಡುವ ಮೂಲಕ ವಿದ್ಯಾರ್ಥಿಗಳ ಪ್ರಗತಿಗೆ ಸರ್ಕಾರ ನೆರವಾಗಿದೆ ಎಂದು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ವೈಸ್‌ಚಾನ್ಸಿಲರ್ ಪ್ರೊ.ಎಸ್.ಆರ್.ನಿರಂಜನ ತಿಳಿಸಿದರು.ಕಾರ್ಯನಿಮಿತ್ತ ಚಳ್ಳಕೆರೆ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಜಿಲ್ಲಾ ವಕೀಲ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ(ವೈಟಿಎಸ್)ರವರ ನಿವಾಸಕ್ಕೆ ಭೇಟಿ ನೀಡಿ ಎಲ್‌ಐಸಿ ದುಗ್ಗಾವರರಂಗಸ್ವಾಮಿ ಬಳಗದಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು.ಯಾವುದೇ ಕ್ಷೇತ್ರದಲ್ಲಾಗಲಿ ನಾವು ಬದಲಾವಣೆ ಕಡೆ ಗಮನಹರಿಸಿದಾಗ ಮಾತ್ರ ನಮ್ಮ ಕೆಲಸ ಸಾರ್ಥಕವಾಗುತ್ತದೆ. ಯಾವುದೇ ಸಂದರ್ಭದಲ್ಲಾದರೂ ನಾವು ದಕ್ಷತೆ, ಪ್ರಾಮಾಣಿಕತೆಯಿಂದ ನಮ್ಮ ಕರ್ತವ್ಯ ಮಾಡಬೇಕಿದೆ ಎಂದರು.

**ಪ್ರಮುಖ ಸುದ್ದಿ**

# ಕಿತ್ತೂರಿನಲ್ಲಿ ನಡೆದ ಮೊದಲ ಕಾಳಗವೇ ಸ್ವಾತಂತ್ರ್ಯ ಸಂಗ್ರಾಮದ ಮುನ್ನುಡಿ; ಸಂಸರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿಕೆ

» ದಾವಣಗೆರೆ



ಸ್ವಾತಂತ್ರ್ಯ ಸಂಗ್ರಾಮದ ಕಿಚ್ಚು ಕಿತ್ತೂರಿನಲ್ಲಿ 1824ರಲ್ಲಿ ಆರಂಭವಾಗಿದ್ದು ಇದು ಸ್ವಾತಂತ್ರ್ಯ ಸಂಗ್ರಾಮದ ಮೊದಲ ಕಾಳಗ ವಾಗಿತ್ತು ಎಂದು ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ, ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜ(ರಿ), ಜಿಲ್ಲಾ ಘಟಕ ದಾವಣಗೆರೆ, ಅಖಿಲ ಭಾರತ ಲಿಂಗಾಯುತ ಪಂಚಮಸಾಲಿ ಮಹಾಸಭಾ(ರಿ), ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ದಾವಣಗೆರೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಕುವೆಂಪು ಕನ್ನಡ ಭವನದ ರಾಷ್ಟಕವಿ ಡಾ. ಜಿ.ಎಸ್ ಶಿವರುದ್ರಪ್ಪ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ, ಕಿತ್ತೂರಾಣಿ ಚೆನ್ನಮ್ಮ ಜಯಂತಿ ಹಾಗೂ 200 ದಶಕದ ವಿಜಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಬ್ರಿಟಿಷರ ವಿರುದ್ಧ ರಣಚಂಡಿಯಾಗಿ ಹೋರಾಟ ನಡೆಸಿ ಕಿತ್ತೂರ ಸಂಸ್ಥಾನದ ಸ್ವಾಭಿಮಾನ, ನಾಡ ಪ್ರೇಮ, ಅಖಂಡ ಭಾರತ ದೇಶದ ಸ್ವಾತಂತ್ರ್ಯ ಪ್ರಿಯರಿಗೆ ದಿಟ್ಟ ಹೋರಾಟದ ಮೂಲಕ ಸಾಬೀತು ಪಡಿಸಿದ ಸುದಿನವೇ ಈ ದಿನವಾಗಿದೆ ಎಂದು ತಿಳಿಸಿದರು.

ಈ ಸಂಗ್ರಾಮದಲ್ಲಿ ಅಮಟೂರು ಬಾಳಪ್ಪ ಥ್ಯಾಕರೆ ಸಾಹೇಬನ ಎದೆಗೆ ಗುಂಡು ಹಾರಿಸಿ ಹತ್ಯೆ ಮಾಡುತ್ತಾನೆ. ಥ್ಯಾಕರೆ ಹತ್ಯೆ ಬ್ರಿಟಿಷ್ ಅಧಿಕಾರಿಗಳ ನಿದ್ದೆ ಕೆಡಿಸಿತು. ನಂತರ ಎರಡನೇ ಬಾರಿ ಕಿತ್ತೂರ ಸಂಸ್ಥಾನದ ಮೇಲೆ ದಾಳಿ ನಡೆಸಿದ ಬ್ರಿಟಿಷರು ಕುತಂತ್ರದಿಂದ ಅಲ್ಲಿನ ಕೆಲ ದೇಶದ್ರೋಹಿಗಳ ಸಹಯೋಗ ಪಡೆದು ರಾಣಿ ಚೆನ್ನಮ್ಮ ಸೋಲು ಅನುಭವಿಸುವಂತಾಯಿತು.

ಧೂಳಪ್ಪಗೌಡ ದೇಸಾಯಿ ಯುದ್ಧ ಕಲೆಯಲ್ಲಿ ನಿಪುಣರಾಗಿದ್ದರು. ಇವರು ತಮ್ಮ ಮಗಳಿಗೆ ಸರ್ವ ವಿದ್ಯೆಯನ್ನೂ ಕಲಿಸಿದ್ದರು. ರಾಜಕಳೆಯ ಹೆಣ್ಣು ಮಗುವೇ ಮುಂದೆ ಕಿತ್ತೂರ ಮಹಾಸಂಸ್ಥಾನದ ಮಹಾರಾಣಿ ಪಟ್ಟ ವಹಿಸಿಕೊಂಡು ಕಿತ್ತೂರು ನಾಡನ್ನು ಸಮೃದ್ಧ ನಾಡಾಗಿ ಬೆಳೆಸಿದ ಕೀರ್ತಿ ರಾಣಿ ಚೆನ್ನಮ್ಮನವರಿಗೆ ಸಲ್ಲುತ್ತದೆ ಎಂದು ತಿಳಿಸಿದರು. ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಅಧ್ಯಕ್ಷತೆ ವಹಿಸಿ ಮಾತನಾಡಿ 1764ರ ಬಕ್ಸರ್ ಕದನದಲ್ಲಿ ಸಿರಾಜ್ ಉದ್ ದೌಲ ಸೋಲದೆ ಇದ್ದಿದ್ದರೆ ಬ್ರಿಟಿಷರು ನಮ್ಮ ದೇಶದಲ್ಲಿ ಕಾಲಿಡಲು ಆಗುತ್ತಿರಲ್ಲಿ. 1824 ಒಂದು ಪುಣ್ಣ ಸಂಸ್ಥಾನದ ವೀರ ಮಹಿಳೆಯಾದ ಕಿತ್ತೂರುರಾಣಿ ಚೆನ್ನಮ್ಮ ಬ್ರಿಟಿಷರನ್ನ ಸೋಲಿಸಿದ ದಿನವಾಗಿದೆ. ಹಾಗೂ 1857 ಪ್ರಥಮ ಸ್ವತಂತ್ರ ಸಂಗ್ರಾಮದ ಸ್ಫೂರ್ತಿ ಸ್ವರೂಪವೇ ಕಿತ್ತೂರುರಾಣಿ ಚೆನ್ನಮ್ಮ, ಆದ್ದರಿಂದ ಇವರ ಯಶೋಗಾಥೆಯನ್ನು ನಮ್ಮ ಮಕ್ಕಳಿಗೆ ತಿಳಿಸಬೇಕು ಎಂದರು.

ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಫ್ರಾಧ್ಯಾಪಕಿ ಡಾ. ವೀಣಾ ಕಿತ್ತೂರು ರಾಣಿ ಚೆನ್ನಮ್ಮನವರ ಹುಟ್ಟು ಮತ್ತು ಸಾಧನೆಯ ಬಗ್ಗೆ ಸವಿಸ್ತರವಾದ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಮೇಯರ್ ಚಮನ್ ಸಾಬ್, ಉಪಮೇಯರ್ ಸೋಗಿ ಶಾಂತಕುಮಾರ್, ಕೂಡಲಸಂಗಮ ಅಖಿಲ ಭಾರತ ಲಿಂಗಾಯುತ ಪಂಚಮಸಾಲಿ ಮಹಾಸಭಾದ ರಾಜ್ಯ ಯುವ ಸಂಘದ ಅಧ್ಯಕ್ಷರಾದ ಬಿ.ಜಿ.ಅಜೇಯ್ ಕುಮಾರ್, ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷರಾದ ಬಿ.ಸಿ.ಉಮಾಪತಿ, ಅಖಿಲ ಭಾರತ ಲಿಂಗಾಯುತ ಪಂಚಮಸಾಲಿ ಮಹಾಸಭಾದ ಜಿಲ್ಲಾಧ್ಯಕ್ಷರಾದ ಆರ್.ಬಿ.ಅಶೋಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ರವಿಚಂದ್ರ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T